MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 05 | ಸಂಚಿಕೆ: 46 | ಗುರುವಾರ :04-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 46 | THURSDAY : 04-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## "ನೀರು, ಬೆಳೆ ಪರಿಹಾರಕ್ಕೆ ಆಗ್ರಹ: ಬಿಜೆಪಿ ರೈತ ಮೋರ್ಚಾದಿಂದ ಬೃಹತ್ ಪ್ರತಿಭಟನೆ

ಯುವಮಾರ್ಗ ಸುದ್ದಿ




**ಮಾನ್ವಿ,ಡಿ.3–** ಬಿಜೆಪಿ ಮಾನ್ವಿ ಮಂಡಲದ ರೈತ ಮೋರ್ಚಾ ವತಿಯಿಂದ ತಾಲೂಕಿನ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಪಟ್ಟಣದ ಬಸವ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಇದೆ ವೇಳೆ ಮಾಜಿ ಶಾಸಕ ಗಂಗಾಧರ ನಾಯಕ ಅವರು ಮಾತನಾಡಿ, ತುಂಗಭದ್ರ ಜಲಾಶಯದಲ್ಲಿ ನೀರಿನ ಸಂಗ್ರಹವಿದ್ದರೂ ರಾಜ್ಯ ಸರ್ಕಾರವು ಟಿ.ಎಲ್.ಬಿ.ಸಿ. ಮೂಲಕ ಎರಡನೇ ಬೆಳೆಗೆ ನೀರು ಹರಿಸಲು ಮುಂದಾಗದ ಕಾರಣ ರೈತರಿಗೆ ಉಂಟಾದ ನಷ್ಟಕ್ಕೆ ಪ್ರತಿ ಎಕರೆಗೆ ರೂ.25 ಸಾವಿರ ಪರಿಹಾರ ನೀಡಬೇಕೆಂದು ಆಗ್ರಹಿಸಿದರು. ಅತಿವೃಷ್ಟಿಯಿಂದ ಬೆಳೆಗಳು ಮತ್ತು ದಾಳಿಂಬೆ ತೋಟಗಳಿಗೆ ನಷ್ಟವಾಗಿದ್ದು, ತಕ್ಷಣವೇ ರೈತರ ಖಾತೆಗೆ ಪರಿಹಾರ ಜಮಾ ಮಾಡಬೇಕು, ಹಾಗೂ ವೈರಸ್ ಸೋಕಿನಿಂದ ಭತ್ತದ ಇಳುವರಿ ಕುಸಿತವಾಗಿದ್ದರಿಂದ ವಿಶೇಷ ಪರಿಹಾರದ ಪ್ಯಾಕೇಜ್ ಘೋಷಿಸಬೇಕು ಎಂದು ಒತ್ತಾಯಿಸಿದರು. ಇದರೊಂದಿಗೆ, ರೈತರಿಗೆ ಉಚಿತವಾಗಿ ವಿದ್ಯುತ್ ವಿತರಿಸಲು, ಹಾಲಿನ ಸಹಾಯಧನ ಹೆಚ್ಚಿಸಲು, ಬೆಂಬಲ ಬೆಲೆ ಯೋಜನೆಯಡಿಯಲ್ಲಿ ತೊಗರಿ, ಜೋಳ, ಭತ್ತ ಮತ್ತು ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಸಕಾಲದಲ್ಲಿ ಪ್ರಾರಂಭಿಸಲು, ಮುದ್ರಾಂಕ ಶುಲ್ಕವನ್ನು ಕಡಿಮೆ ಮಾಡಲು, ಎ.ಪಿ.ಎಂ.ಸಿ.ಯಲ್ಲಿ ಪಾರದರ್ಶಕ ಆಡಳಿತ ತರಲು ಮತ್ತು ಸಿ.ಸಿ.ಐ.ನಿಂದ ಹತ್ತಿ ಖರೀದಿಗೆ ಅಗತ್ಯವಿರುವಷ್ಟು ಹತ್ತಿ ಮಿಲ್‌ಗಳನ್ನು ಒದಗಿಸಲು ಒತ್ತಾಯಿಸಲಾಯಿತು. ಮಾನ್ವಿ ಮಂಡಲ ಬಿಜೆಪಿ ಅಧ್ಯಕ್ಷರಾದ ವೀರಭದ್ರಗೌಡ ಭೋಗಾವತಿ ಅವರು ಕೃಷಿ ಇಲಾಖೆಯಿಂದ ದೊರೆಯುವ ಸಹಾಯ ಧನಕ್ಕೆ ಅಗತ್ಯ ಅನುದಾನ ಮೀಸಲಿಡಬೇಕು, ರೈತರಿಗೆ ಕೇಂದ್ರದ ಸಮ್ಮಾನ್ ನಿಧಿಯ ಜೊತೆ ರಾಜ್ಯ ಸರ್ಕಾರ ನೀಡುತ್ತಿದ್ದ ವಾರ್ಷಿಕ ರೂ4,000 ಪುನರಾರಂಭಿಸಬೇಕು, ರೈತರ ಮಕ್ಕಳ ಶಿಕ್ಷಣಕ್ಕೆ ಸಹಾಯಕವಾಗಿದ್ದ ವಿದ್ಯಾಸಿರಿ ಯೋಜನೆ ಯನ್ನು ಮರಳಿ ತರಬೇಕು ಮತ್ತು ಬೆಂಬಲ ಬೆಲೆಯಲ್ಲಿ ಖರೀದಿಸಿದ ಆಹಾರ ಧಾನ್ಯಗಳಿಗೆ ಶೀಘ್ರವೇ ಹಣ ಜಮಾ ಮಾಡಬೇಕು ಎಂದು ಆಗ್ರಹಿಸಿದರು. ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ್ ಭೀಮ ರಾಯ ಬಿ. ರಾಮಸಮುದ್ರ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

## ರಾಜಕೀಯ ಜಿದ್ದಾಜಿದ್ದಿಗೆ ವೇದಿಕೆಯಾದ ಮಂಗಳೂರಿನ ವೈಚಾರಿಕ ಸಮಾವೇಶ

**ಮಂಗಳೂರು, ಡಿ.3–** ಕರಾವಳಿ ಜಿಲ್ಲೆ ಮಂಗಳೂರಿನಲ್ಲಿಂದು ವೈಚಾರಿಕ ನೆಲೆಯಲ್ಲಿ ನಡೆಯಬೇಕಿದ್ದ ಕಾರ್ಯಕ್ರಮ ಪರಸ್ಪರ ರಾಜಕೀಯ ಬಲಪ್ರದರ್ಶನ ಹಾಗೂ ಜಿದ್ದಾಜಿದ್ದಿಗೆ ವೇದಿಕೆಯಾಗಿ ಬದಲಾಗಿತ್ತು.



ಶಿವಗಿರಿ ಮಠ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಬ್ರಹಶ್ರೀ ನಾರಾಯಣ ಗುರು ಅಧ್ಯಯನ ಪೀಠ ಆಯೋಜಿಸಿದ್ದ ಶತಮಾನದ ಮಹಾಪ್ರಸ್ಥಾನ ಅಂಗವಾಗಿ ಗುರು–ಗಾಂಧಿ ಸಂವಾದ ಶತಮಾನೋತ್ಸವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಕಾಂಗ್ರೆಸ್ಸಿನ ಹಿರಿಯ ನಾಯಕ ಬಿ.ಕೆ.ಹರಿಪ್ರಸಾದ್, ಸಚಿವರಾದ ಡಾ.ಜಿ. ಪರಮೇಶ್ವರ್, ದಿನೇಶ್ ಗುಂಡೂರಾವ್, ಸತೀಶ್ ಜಾರಕಿಹೊಳಿ, ಲಕ್ಷ್ಮಿಹೆಬ್ಬಾಳ್ಕರ್ ಮತ್ತಿತರರು ಉಪಸ್ಥಿತರಿದ್ದರು.

ಈ ವೇಳೆ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದ ಕೆ.ಸಿ.ವೇಣುಗೋಪಾಲ್ ಅವರನ್ನು ಸ್ವಾಗತಿಸಲು ಕಾಂಗ್ರೆಸ್ ಕಾರ್ಯಕರ್ತರು ಭಾರೀ ಸಂಖ್ಯೆಯಲ್ಲಿ ಜಮಾಯಿಸಿದ್ದರು. ವೇಣುಗೋಪಾಲ್ ಆಗಮಿಸುತ್ತಿದ್ದಂತೆ ಡಿಕೆ..ಡಿಕೆ.. ಎಂಬ ಘೋಷಣೆಗಳು ಮೊಳಗಿದವು. ಇನ್ನು ಕೆಲವರು ಸಿದ್ದರಾಮಯ್ಯ ಅವರ ಪರವಾಗಿ ಘೋಷಣೆ ಕೂಗಿದರು. ಇದರಿಂದಾಗಿ ಗೊಂದಲದ ವಾತಾವರಣ ನಿರ್ಮಾಣವಾಯಿತು.(2ನೇಪುಟಕ್ಕೆ)

## ರಾಯಚೂರ ಸಿಟಿಗೆ ಕ್ವಾಲಿಟಿ ನೀರು ಪೂರೈಕೆಯಾಗಲಿ: ಸಚಿವರಾದ ಬೈರತಿ ಸುರೇಶ ಕಟ್ಟುನಿಟ್ಟಿನ ಸೂಚನೆ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.3–** ರಾಯಚೂರು ಸಿಟಿಗೆ ಕ್ವಾಲಿಟಿ ನೀರು ಪೂರೈಕೆಗೆ ಅಗತ್ಯ ಕ್ರಮವಹಿಸಬೇಕು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬೈರತಿ ಸುರೇಶ ಅವರು ರಾಯಚೂರು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಿಸೆಂಬರ್ 3ರಂದು ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು. ಜನರ ಆರೋಗ್ಯ ತುಂಬಾ ಮುಖ್ಯ. ಜನತೆಗೆ ಶುದ್ಧ ಮತ್ತು ಸಕಾಲಕ್ಕೆ ನೀರು ಕೊಡುವುದು ನಮ್ಮ ಆದ್ಯ ಕಾರ್ಯವಾಗಬೇಕಿದೆ. ಈ ದಿಶೆಯಲ್ಲಿ ಯೋಚಿಸಿ ಪಾಲಿಕೆಯ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಕನಿಷ್ಟ 40 ಲಕ್ಷ ರೂ.ಗಳನ್ನು ಕುಡಿವ ನೀರಿನ ಲಿಕೇಜ್, ಪೈಪ್ ದುರಸ್ತಿಯಂತಹ (2ನೇ ಪುಟಕ್ಕೆ)

## ಕಾನೂನಿನ ಜ್ಞಾನವನ್ನು ಸಮರ್ಥವಾಗಿ ಬಳಸಿಕೊಳ್ಳಬೇಕು:ನ್ಯಾಯದೀಶ ಶಿವರಾಜ

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.3–** ಪಟ್ಟಣದ ವಕೀಲರ ಸಂಘದ ಸಭಾಂಗಣದಲ್ಲಿ ನಡೆದ ವಕೀಲರ ದಿನಾಚರಣೆ ಕಾರ್ಯಕ್ರಮವನ್ನು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಶಿವರಾಜ .ವಿ. ಸಿದ್ದೇಶ್ವರ ಉದ್ಘಾಟಿಸಿ ಮಾತನಾಡಿ, ಭಾರತ ದೇಶದ ಪ್ರಥಮ ರಾಷ್ಟ್ರಪತಿಗಳಾದ ಡಾ.ರಾಜೇಂದ್ರ ಪ್ರಸಾದ್ ರವರು ವಕೀಲರಾಗಿದ್ದರು ಅದ್ದರಿಂದ ಅವರ ಜನ್ಮದಿನವನ್ನು ವಕೀಲರ ದಿನಾಚರಣೆಯಾಗಿ ಆಚರಿಸಲಾಗುತ್ತಿದೆ. ವಕೀಲರು ಹಾಗೂ ನ್ಯಾಯಾಧೀಶರು ದೇಶದ ಕಾನೂನು ಹಾಗೂ ಸಂವಿಧಾನದ ಜ್ಞಾನವನ್ನು ಹೊಂದುವುದು ಅಗತ್ಯವಾಗಿದೆ. ಜಗತ್ತಿನಲ್ಲಿ ಜ್ಞಾನ ಕಿಂತಲು ಮಿಗಿಲಾದದು ಯಾವುದು ಇಲ್ಲ ನ್ಯಾಯವಾದಿಗಳು ಕಾನೂನಿನ ಜ್ಞಾನವನ್ನು ಸಮರ್ಥವಾಗಿ ಬಳಸಿಕೊಂಡು ತಮ್ಮಲ್ಲಿಗೆ ಬರುವ ಕಾಕ್ಷಿದರರಿಗೆ ನ್ಯಾಯವನ್ನು ಸಿಗುವಂತೆ ಮಾಡಿದಲ್ಲಿ ನಿಮ್ಮ ಹೇಸರು ಇತಿಹಾಸದಲ್ಲಿ ಶಾಶ್ವತವಾಗಿ ಉಳಿಯುತ್ತದೆ. ವಕೀಲರು ಕಾನೂನಿನ ಜ್ಞಾನದ ಜೋತೆಗೆ ಬದುಕಿನ ಜ್ಞಾನವನ್ನು ಪಡೆದುಕೊಂಡಲ್ಲಿ ಜೀವನದಲ್ಲಿ ಪ್ರಬುದ್ದರಾಗಿ ಬದುಕುವುದಕ್ಕೆ ಸಾಧ್ಯವಾಗುತ್ತದೆ. ಎಂದು ತಿಳಿಸಿದರು.




ಸಿವಿಲ್ ನ್ಯಾಯಾಧೀಶರಾದ ಆನಂದ ಹೆಚ್.ಕಣ್ಣೂರ್ ಮಾತನಾಡಿ. ವಕೀಲ ವೃತ್ತಿ ಅತ್ಯಂತ ಶ್ರೇಷ್ಟವಾದ ವೃತ್ತಿಯಾಗಿದ್ದು .ದೇಶವನ್ನು ಕಟ್ಟುವಲ್ಲಿ ವಕೀಲರ ಪಾತ್ರ ಮಹಾತ್ವದಾಗಿದೆ ಸ್ವತಂತ್ರ್ಯ ದೋರಕಿಸುವುದಕ್ಕೆ ನಡೆದ (2ನೇಪುಟಕ್ಕೆ)

## ಗೋವಿಂದ ನಾಯಕರಿಗೆ ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತ ಗೊತ್ತಿಲ್ಲ : ಪಾಮಯ್ಯ ಮುರಾರಿ

## ಬೆಂಬಲಿಗರ ಜೊತೆ ಮಾತಾಡಿಸುವುದು ಬಿಟ್ಟು ನೇರವಾಗಿ ಬನ್ನಿ ಹೂಲಗೇರಿಗೆ ಸವಾಲ್

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಡಿ.3–**ಮಾಜಿ ಶಾಸಕರು ಬಿಜೆಪಿ ಮೂಲದಿಂದ ಬಂದಿರುವವರನ್ನು ಪಕ್ಕಕ್ಕೆ ಇಟ್ಟುಕೊಂಡು, ಬಿಜೆಪಿ ಪಕ್ಷದಿಂದ ಬಂದವರಿಗೆ ಆದ್ಯತೆ ಕೊಟ್ಟಿದ್ದಾರೆ, ಅವರಿಗೆ ಕಾಂಗ್ರೆಸ್ ಪಕ್ಷದ ಸಿದ್ಧಾಂತದ ಬಗ್ಗೆ ಗೊತ್ತಿಲ್ಲ, ನಮ್ಮ ಮೇಲೆ ಸುಳ್ಳು ಆಪಾದನೆ ಮಾಡುವುದನ್ನು ಬಿಡಬೇಕು ನಿಮಗೆ ನೈತಿಕತೆ ಇದ್ದರೆ ನೇರವಾಗಿ ಬನ್ನಿ ಒಂದೇ ವೇದಿಕೆಯಲ್ಲಿ ಸೇರಿ ಚರ್ಚಿಸಲು ನಾವುಗಳು ಸಿದ್ದರಾಗಿದ್ದೇವೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ ಸವಾಲು ಹಾಕಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದವರೆಂದು ಹೇಳಿಕೊಳ್ಳುವ ಕೆಲವರು ಮಾಜಿ ಸಚಿವ ಅಮರೇಗೌಡ ಪಾಟೀಲ್ ಬಯ್ಯಾಪೂರ ಬಗ್ಗೆ ಹಗುರವಾಗಿ ಮಾತನಾಡುವುದನ್ನು ನಿಲ್ಲಿಸಬೇಕು. ನಾವುಗಳೂ ಪಕ್ಷದ ನಿಷ್ಠಾವಂತ ಕಾರ್ಯಕರ್ತರೇ ಆಗಿದ್ದೇವೆ ನಮಗೆ ಎಚ್ಚರಿಕೆ ಇದೆ. ಅದಕ್ಕಾಗಿಯೇ ಎಚ್ಚರಿಕೆಯಿಂದ ಕ್ಷೇತ್ರದಲ್ಲಿ ಪಕ್ಷ ಸಂಘಟನೆ ಮಾಡುತ್ತಿದ್ದೇವೆ.

ಹೂಲಗೇರಿ ಸಂಘ ಬಿಟ್ಟಿದ್ದೇವೆ ಹೊರತು ಕಾಂಗ್ರೆಸ್ ಪಕ್ಷ ಬಿಟ್ಟಿಲ್ಲ : ಶಾಸಕ 2023ರ ಚುನಾವಣೆಯಲ್ಲಿ ನಾವುಗಳು ಅತ್ಯಂತ ಪ್ರಾಮಾಣಿಕತೆಯಿಂದ ದುಡಿದಿದ್ದೇವೆ. ಡಿ.ಎಸ್. ಹೂಲಗೇರಿಯವರ ಸಂಘ ಬಿಟ್ಟಿದ್ದೇವೆಯೇ ಹೊರತು ನಾವು ಕಾಂಗ್ರೆಸ್ ಪಕ್ಷವನ್ನು




ಬಿಟ್ಟಿಲ್ಲ. ಪಕ್ಷದಲ್ಲಿಯೇ ಇದ್ದು ಸಂಘಟನೆಯಲ್ಲಿ ತೊಡಗಿದ್ದೇವೆ.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಪಾಟೀಲ್ ಕರಡಕಲ್ ಮಾತನಾಡಿ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷರೆಂದು ಕೇಳಿಕೊಳ್ಳುವವರು ಪದೇ ಪದೇ ಬಯ್ಯಾಪೂರರ ಬಗ್ಗೆ ಮಾತನಾಡುವುದನ್ನು ನಿಲ್ಲಿಸಬೇಕು. ಅವರು ಕೊಡುವ ಎಚ್ಚರಿಕೆಗೆ ನಾವು ಡೊಂಟ್‌ಕೇರ್ ಎಂದು ಎಚ್ಚರಿಸಿದರು.

ಪಕ್ಷಕ್ಕೆ ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸಿದವರಿಗೆ ಗೌರವ ಸಿಗದೇ ಇರುವ ಸಂದರ್ಭದಲ್ಲಿ ಹೂಲಗೇರಿಯವರ ಸಂಘ ತೊರೆದು ಮಾಜಿ ಸಚಿವರ ಜೊತೆಗಿದ್ದೇವೆ. ಕಾಂಗ್ರೆಸ್ ಪದ ಮೂಲ ಕಾರ್ಯಕರ್ತರು ನಾವುಗಳು ಕ್ಷೇತ್ರದಲ್ಲಿ ಈ ಸಂಘಟನೆ ಕಾರ್ಯದಲ್ಲಿ ತೊಡಗಿರುವುದು ಅವರಿಗೆ ಸಹಿಸಲು ಆಗುತ್ತಿಲ್ಲ. ಇದಕ್ಕಾಗಿ ಇಲ್ಲಸಲ್ಲದ ಆರೋಪ ಮಾಡುವಲ್ಲಿ ನಿರತರಾಗಿದ್ದಾರೆ. ಬಿಜೆಪಿ ಆರ್‌ಎಸ್ ಮೂಲದಿಂದ ಬಂದವರು ಯಾವತ್ತೂ ಕಾಂಗ್ರೆಸ್ ತತ್ವ ಸಿದ್ಧಾಂತ. ಜಾತ್ಯಾತೀತ ಮನೋಭಾವನೆ ಹೊಂದಲು ಸಾಧ್ಯವಿಲ್ಲ, ನಾವು ಪಕ್ಷದ ಹಿರಿಯರ ನಿರ್ದೇಶನದಂತೆ ಕ್ಷೇತ್ರದಲ್ಲಿ ಸಂಘಟನೆ ಮಾಡುತ್ತಿದ್ದೇವೆ ಎಂದರು.

ಮಿಸಲು ಎನ್ನುವುದು ಕೆಲ ಸಮಾಜಗಳಿಗೆ ರಾಜಕೀಯವಾಗಿ ನೀಡುವ ಪ್ರಾತಿನಿಧ್ಯವೇ ಹೊರತು. ಪಟ್ಟಾಭಿಷೇಕವಲ್ಲ, ಕೇವಲ ಮೀಸಲಿರುವವರೇ ನಿಮಗೆ ಮತ ಹಾಕಿದ್ದಾರೆಯೇ.? ಅದನ್ನು ಸರಿಯಾಗಿ ಅರ್ಥಮಾಡಿಕೊಂಡು ಮಾತನಾಡಬೇಕು. ಎ0ದು ಹಿರಿಯ ಮುಖಂಡ ಡಿ.ಜಿ. ಗುರಿಕಾರ ಮಾತನಾಡಿದರು.

ಈ ಸಂದರ್ಭದಲ್ಲಿ ಗುಂಡಪ್ಪ ನಾಯಕ, ಅನೀಷಪಾಷ, ಮಲ್ಲಯ್ಯ, ಪ್ರಕಾಶ ಕುರಿ, ಜಗದೇಶ ಗೌಡ, ಶರಣಪ್ಪ ಹುನಕುಂಟಿ, ಈರಪ್ಪ ಸೇರಿದಂತೆ ಇದ್ದರು.

## ಮಾನ್ವಿ ವಿಧಾನಸಭಾ ಕ್ಷೇತ್ರದ 4 ಶಾಲೆಗಳು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೆ : ಹಂಪಯ್ಯ ನಾಯಕ

ಯುವಮಾರ್ಗ ಸುದ್ದಿ

**ಸಿರವಾರ, ಡಿ.3–**ಸಿರವಾರ ತಾಲೂಕಿನ ಕುರುಕುಂದಾ ಸರ್ಕಾರಿ ಶಾಲೆ ಸೇರಿ ಮಾನ್ವಿ ವಿಧಾನಸಭಾ ಕ್ಷೇತ್ರದ 4 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಬಿವೃದ್ಧಿ ಪಂಡಳಿಯ ಅನುದಾನ ದಡಿ ಮೇಲ್ದರ್ಜೆಗೇರಿಸಲಾಗಿದೆ ಎಂದು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ ಪತ್ರಿಕೆಗೆ ತಿಳಿಸಿದರು.



ಅವರು ಮಂಗಳವಾರ ಮಾಧ್ಯಮದವರೊಂದಿಗೆ ಮಾತನಾಡಿ ನಮ್ಮ ರಾಜಕೀಯ ಗುರುಗಳಾದ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವರಾದ ಎನ್.ಎಸ್.ಬೋಸರಾಜು ಅವರು ಕ್ಷೇತ್ರದಲ್ಲಿ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡುವ ದೃಷ್ಟಿಯಿಂದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅನುದಾನದಡಿ ಸಿರವಾರ ತಾಲೂಕಿನ ಕುರಕುಂದ, ಮಾನ್ವಿ ತಾಲೂಕಿನ ಚೀಕಲಪರ್ವಿ, ತಡಕಲ್ ಹಾಗೂ ಮಾನ್ವಿ ನಗರದ ನಮಾಜಗೇರಾ ಗುಡ್ಡ ಶಾಲೆಗಳನ್ನು ಉನ್ನತೀಕರಿಸಿ ಈ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ 2025 26 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ಮೇಲ್ದರ್ಜೆಗೇರಿಸಲಾಗಿದ್ದು ಕ್ಷೇತ್ರದ ಬಡ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಸಲಹೆ ನೀಡಿದರು.

## ಮಹಿಳೆಯರ ಸಾಧನೆ ಸಮಾಜಕ್ಕೆ ಸ್ಫೂರ್ತಿ : ಶಾಸಕ ಮಾನಪ್ಪ ವಜ್ಜಲ್

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಡಿ.3–** ಮಹಿಳೆಯರ ಜೀವನದಲ್ಲಿ ಹಲವು ಪಾತ್ರಗಳನ್ನು ನಿಭಾಯಿಸುವ ಮೂಲಕ ಸಮಾಜದ ಸ್ಪೂರ್ತಿಯಾಗಿದ್ದು, ಕುಟುಂಬದ ಜವಬ್ದಾರಿ ಹೊತ್ತು ಸಂಸಾರ ನಿರ್ವಹಣೆಯಲ್ಲಿ ಅತಿಮುಖ್ಯ ಪಾತ್ರ ವಹಿಸುರುತ್ತಾಳೆ ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.

ಪಟ್ಟಣದ ಆರ್‌ಎಂಎಸ್ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ ನೂತನ ಗಾರ್ಮೆಂಟ್ಸ ಸ್ಥಾಪನೆಗೆ ಚಾಲನೆ ಹಾಗೂ ಹೊಲಿಗೆ ಮತ್ತು ಬ್ಯೂಟಿಷಿಯನ್ ಕಲಿಕಾರ್ಥಿಗಳ (2ನೇಪುಟಕ್ಕೆ)



## ಮೊದಲನೇಯ ಪುಟದಿಂದ

# ರಾಜಕೀಯ ಜಿದ್ದಾಜಿದ್ದಿಗೆ ವೇದಿಕೆಯಾದ ಮಂಗಳೂರಿನ ವೈಚಾರಿಕ ಸಮಾವೇಶ

ಕಾಂಗ್ರೆಸ್ ಹೈಕಮಾಂಡ್ ದೊಡ್ಡ ಮನಸ್ಸು ಮಾಡಿ ಡಿ.ಕೆ.ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ನಾಯಕರಾದ ಮಿಥುನ್ ರೈ ಮತ್ತಿತರರು ಒತ್ತಾಯಿಸಿದರು. ಗುರು–ಗಾಂಧಿ ಕಾರ್ಯಕ್ರಮ ಸಂಪೂರ್ಣ ವೈಚಾರಿಕ ಹಿನ್ನೆಲೆ ಹೊಂದಿತ್ತು. ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆಯ ಗೊಂದಲಗಳು ಕೇಳಿ ಬರುವ ಮೊದಲೇ ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳು ಮುದ್ರಣವಾಗಿ ಹಂಚಿಕೆಯಾಗಿದ್ದವು.

ಹಿಂದುಳಿದ ಸಮುದಾಯಗಳ ಆಶೋತ್ತರ ಬ್ರಹಶ್ರಿ ನಾರಾಯಣ ಗುರುಗಳ ಧ್ಯೆಯವಾಗಿತ್ತು. ಹಾಗಾಗಿ ಕಾರ್ಯಕ್ರಮಕ್ಕೆ ಸಿದ್ದರಾಮಯ್ಯ ಮತ್ತು ಇತರ ಹಿಂದುಳಿದ ವರ್ಗಗಳ ನಾಯಕರನ್ನು ಆಹ್ವಾನಿಸಲಾಗಿತ್ತು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಆಹ್ವಾನಿಸಿರಲಿಲ್ಲ ಎಂಬುದು ದೊಡ್ಡ ಚರ್ಚೆಯಾಗಿದೆ. ಅದಕ್ಕೆ ತಕ್ಕಂತೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳೂರಿನ ವಿಮಾನ ನಿಲ್ದಾಣ ಮತ್ತು ಮಂಗಳೂರಿನ ಸರ್ಕ್ಯೂಟ್ ಹೌಸ್ ನಲ್ಲಿ ಕೆ.ಸಿ.ವೇಣುಗೋಪಾಲ್ ಅವರ ಜೊತೆ ಪ್ರತ್ಯೇಕ ಮಾತುಕತೆ ನಡೆಸಿದ್ದಾರೆ.

# ರಾಯಚೂರ ಸಿಟಿಗೆ ಕ್ವಾಲಿಟಿ ನೀರು ಪೂರೈಕೆಯಾಗಲಿ: ಸಚಿವರಾದ ಬೈರತಿ ಸುರೇಶ ಕಟ್ಟುನಿಟ್ಟಿನ ಸೂಚನೆ

ಬೇರೆ ಬೇರೆ ಕಾರ್ಯಗಳಿಗೆಂದೇ ಮೀಸಲಿರಿಸಿ, ಶುದ್ಧ ನೀರು ಪೂರೈಕೆಗೆ ಒತ್ತು ಕೊಡಬೇಕು ಎಂದು ಪಾಲಿಕೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕುಡಿವ ನೀರು ಪರೀಕ್ಷೆಯ ಬಗ್ಗೆ ಸಚಿವರು ಅಧಿಕಾರಿಗಳಿಗೆ ಕೇಳಿದರು. ಪ್ರತಿ ದಿನ ಮೂರು ಭಾರಿ ಪರೀಕ್ಷೆಗೊಳಪಡಿಸಿಯೇ ಕುಡಿವ ನೀರು ಪೂರೈಕೆ ಮಾಡುತ್ತಿದ್ದೇವೆ. ರಾಯಚೂರು ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯ ಪ್ರಯೋಗಾಲಯ ಕೇಂದ್ರದಲ್ಲಿ ಸಹ ನೀರನ್ನು ಪರೀಕ್ಷಿಸಿ ಸಿಟಿಗೆ ನೀರು ಪೂರೈಕೆ ಮಾಡುತ್ತಿದ್ದೇವೆ ಎಂದು ಮಹಾನಗರ ಪಾಲಿಕೆ ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

ತೆರಿಗೆ ವಸೂಲಾತಿಯಲ್ಲಿ ಪ್ರಗತಿ ತೋರಿದ್ದೀರಾ ಎಂದು ಸಚಿವರು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಪ್ರಶ್ನಿಸಿದರು. ಮಹಾನಗರ ಪಾಲಿಕೆಯಿಂದ ರಾಯಚೂರು ಸಿಟಿ ವ್ಯಾಪ್ತಿಯಲ್ಲಿ ವಿಶೇಷ ಅಭಿಯಾನ ನಡೆಸಿ ತೆರಿಗೆ ಸಂಗ್ರಹದಲ್ಲಿ ಪ್ರಗತಿ ತೋರಿದ್ದೇವೆ ಎಂದು ರಾಯಚೂರು ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ ಅವರು ಸಚಿವರಿಗೆ ತಿಳಿಸಿದರು.

ಪೌರಕಾರ್ಮಿಕರ ನೇಮಕಾತಿಗೆ ಕ್ರಮ: ರಾಯಚೂರು ನಗರಸಭೆಯು ಮಹಾನಗರ ಪಾಲಿಕೆಯಾಗಿ ಮೇಲ್ದರ್ಗೇರಿದ ಬಳಿಕ ಹೆಚ್ಚುವರಿ 75 ಪೌರ ಕಾರ್ಮಿಕರ ನೇಮಕಾತಿಯ ಪ್ರಸ್ತಾವಣೆಯ ಬಗ್ಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಚಿವರ ಗಮನಕ್ಕೆ ತಂದರು. ಸಭೆಯಲ್ಲಿಯೇ, ಬೆಂಗಳೂರಿಗೆ ದೂರವಾಣಿ ಕರೆ ಮಾಡಿದ ಸಚಿವರು, ಪ್ರಸ್ತಾವಣೆಯ ಬಗ್ಗೆ ಕೂಡಲೇ ಗಮನ ಹರಿಸಿ ಹೆಚ್ಚುವರಿ 75 ಪೌರ ಕಾರ್ಮಿಕರ ನೇಮಕಾತಿಯ ಪ್ರಕ್ರಿಯೆಯನ್ನು ಸಂಜೆಯೊಳಗೆ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.ಸಿಟಿಯಲ್ಲಿ ಒತ್ತುವರಿ ತಡೆಯಬೇಕು: ರಾಯಚೂರು ಸಿಟಿ ವ್ಯಾಪ್ತಿಯಲ್ಲಿನ ಕೆರೆ ಜಾಗ, ಸ್ಮಶಾನ ಜಾಗ ಸೇರಿದಂತೆ ಯಾವುದೇ ಸಾರ್ವಜನಿಕ ಜಾಗವು, ಯಾವುದೇ ವ್ಯಕ್ತಿಗಳಿಂದ ಅತಿಕ್ರಮಣವಾಗದಂತೆ ನೋಡಿಕೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಸಚಿವರೊಂದಿಗೆ ಚರ್ಚೆ:** ಸದ್ಯ ರಾಯಚೂರಗೆ ಒಟ್ಟು 52 ಎಂಎಲ್ ಡಿ ಪ್ರಮಾಣದ ನೀರು ಪೂರೈಕೆಯಾಗುತ್ತಿದ್ದು, ಇದು ಸಾಕಾಗುತ್ತಿಲ್ಲ. ರಾಯಚೂರು ಸಿಟಿಗೆ ಹೆಚ್ಚುವರಿಯಾಗಿ 20 ಎಂಎಲ್‌ಡಿಯಷ್ಟು ನೀರು ಬೇಕಿದೆ. 3.20 ಲಕ್ಷ ಜನತೆಗೆ ಅನುಕೂಲವಾಗುವಂತೆ ಸಮರ್ಪಕ ನೀರು ಪೂರೈಕೆಗೆ ಕಾರ್ಯಯೋಜನೆ ರೂಪಿಸಿ ಕಾರ್ಯರೂಪಕ್ಕೆ ತರಬೇಕಿದೆ ಎಂದು ನಗರ ಶಾಸಕರಾದ ಡಾ.ಶಿವರಾಜ ಎಸ್ ಪಾಟೀಲ ಅವರು ಸಚಿವರೊಂದಿಗೆ ಚರ್ಚಿಸಿದರು.

ಮೈಸೂರ ನಂತರ ರಾಯಚೂರು ಸಿಟಿ ವ್ಯಾಪ್ತಿಯಲ್ಲಿಯೇ ಅತಿ ಹೆಚ್ಚು 36 ಸ್ಲಂಗಳಿದ್ದು, ಇಲ್ಲಿ 35 ಸಾವಿರ ವಸತಿಗಳಿದ್ದು, ಈ ಸ್ಲಮ್ ನಿವಾಸಿಗಳಿಗೆ ಪಾಲಿಕೆಯಿಂದ ಇ ಖಾತಾ ಪೂರೈಕೆಗೆ ಪರಿಶೀಲಿಸಬೇಕಿದೆ ಎಂದು ಶಾಸಕರು ತಿಳಿಸಿದರು.

ಸಭೆಯಲ್ಲಿ ಮಸ್ಕಿ ಶಾಸಕರಾದ ಬಸನಗೌಡ ತುರವಿಹಾಳ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ., ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ಪಾಲಿಕೆಯ ಸಮಿತಿ ಕಾರ್ಯದರ್ಶಿ ಶ್ರೀಕೃಷ್ಣ ಶಾವಂತಗೇರಿ ಹಾಗೂ ಇತರರು ಇದ್ದರು.

# ಕಾನೂನಿನ ಜ್ಞಾನವನ್ನು ಸಮರ್ಥವಾಗಿ ಬಳಸಿಕೊಳ್ಳಬೇಕು:ನ್ಯಾಯದೀಶ ಶಿವರಾಜ

ಹೋರಾಟದಲ್ಲಿ ಹಾಗೂ ನಂತರದಲ್ಲಿ ಜನರ ಹಕ್ಕುಗಳಿಗೆ ಹಾಗೂ ಸಮಸ್ಯೆಗಳಿಗೆ ನಿರಂತರವಾಗಿ ನ್ಯಾಯವಾಧಿಗಳು ಪ್ರಮುಖ ಪಾತ್ರವನ್ನು ವಹಿಸಿದ್ದರೆ. ಅದ್ದರಿಂದ ಕಿರಿಯ ವಕೀಲರು ಹಿರಿಯ ವಕೀಲರಿಂದ ಕಾನೂನಿನ ಜ್ಞಾನವನ್ನು ಪಡೆದುಕೊಂಡು ನಿರಂತರವಾಗಿ ಅಧ್ಯಯನ ಶೀಲರಾಗಿ ,ಪ್ರಮಾಣಿಕತೆ ,ಶಿಸ್ತುಬದ್ದವಾದ ವಕೀಲ ವೃತ್ತಿಯನ್ನು ನಡೆಸಬೇಕು ಎಂದು ತಿಳಿಸಿದರು.

ವಕೀಲ ವೃತ್ತಿಯಲ್ಲಿ 25 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಹಿರಿಯ ವಕೀಲರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾನ್ವಿ ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್, ಸಹಾಯಕ ಸರ್ಕಾರಿ ಅಭಿಯೋಜಕರಾದ ಅರ್ಚನಾ ಹನುಮೇಶ, ವಕೀಲರ ಸಂಘದ ಉಪಾಧ್ಯಕ್ಷರಾದ ವಿಶ್ವನಾಥ ರಾಯಪ್ಪ ,ಶಿವಪ್ಪ ನಾಯಕ ಸುಂಕನೂರು, ಪ್ರ.ಕಾರ್ಯದರ್ಶಿ ಯಲ್ಲಪ್ಪ ಹಿರೇಬಾದರದಿನ್ನಿ, ಚಂದ್ರಕಲಾ, ಗೂಗಲ್ ನಾಗರಾಜ, ಸ್ಟೆಲ್ಲಾ ಶಾರ್ಲೆಟ್, ಹಿರಿಯ ನ್ಯಾಯವಾದಿಗಳಾದ ಎ.ಬಿ.ಉಪ್ಪಳಮಠ ವಕೀಲರು, ಶೇಖರಪ್ಪ ಪಾಟೀಲ್, ಬಿ.ಚನ್ನನಗೌಡ ಪಾಟೀಲ್, ಬಿ.ಕೆ.ಅಮರೇಶಪ್ಪ, ಮಲ್ಲಿಕಾರ್ಜುನ ಪಾಟೀಲ್, ಸೇರಿದಂತೆ ಇನ್ನಿತರರು ಇದ್ದರು.

# ಮಹಿಳೆಯರ ಸಾಧನೆ ಸಮಾಜಕ್ಕೆ ಸ್ಪೂರ್ತಿ : ಶಾಸಕ ಮಾನಪ್ಪ ವಜ್ಜಲ್

ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸಂಸ್ಥೆಯ ಮುಖ್ಯಸ್ಥೆ ಹಾಗೂ ತರಬೇತಿದಾರರಾದ ಪವಿತ್ರ ಹೂಗಾರ ಅವರು 120 ಮಹಿಳೆಯರಿಗೆ ತರಬೇತಿ ನೀಡಿ ಉದ್ಯೋಗ ಅವಕಾಶ ಕಲ್ಪಿಸುವ ಕಾರ್ಯ ಶ್ಲಾಘನೀಯವಾಗಿದ್ದು ಇಂತಹ ಕೆಲಸಕ್ಕೆ ಸದಾ ನಮ್ಮ ಬೆಂಬಲ ಇರುತ್ತದೆ, ಚುನಾವಣೆ ಸಂದರ್ಭದಲ್ಲಿ ನಾನೇ ಪ್ರಚಾರ ಭಾಷಣದಲ್ಲಿ ಮಾತನಾಡಿದ್ದೆ, ಮಹಿಳೆಯರಿಗೆ ಸ್ವಂತ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಕನಿಷ್ಠ 2 ಸಾವಿರ ಮಹಿಳೆಯರ ಉದ್ಯೋಗ ಸೃಷ್ಟಿಸಲು ಗಾರ್ಮೆಂಟ ಮಾಡುವದಾಗಿ ಹೇಳಿದ್ದೆ ಆದರೆ ನಮ್ಮ ತಾಲೂಕಿನ ಮಹಿಳೆಯರಿಗೆ ಅನುಕೂಲ ಆಗುವ ಉದ್ಯೋಗ ಅವಕಾಶ ದೊರೆಯುವಂತಹ ಕೆಲಸ ಮಾಡಿದ ಪವಿತ್ರ ಹೂಗಾರ ಅವರು ಇನ್ನೂ ಹೆಚ್ಚಿನ ರೀತಿಯಲ್ಲಿ ಮಹಿಳೆಯರಿಗೆ ತರಬೇತಿ ನೀಡಿ ಸ್ವಾವಲಂಭಿ ಬದುಕು ಸಾಗಿಸಲು ದಾರಿದೀಪವಾಗಲಿ ಎಂದರು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲ ಕ್ಷೇತ್ರದಲ್ಲಿ ಸಾಕಷ್ಟು ಸಾಧನೆ ಮಾಡಿದ ಮಹಿಳೆ ಪುರುಷರಿಗೆ ಸಮಾನವಾಗಿ ಉನ್ನತ ಹುದ್ದೆ ಹಾಗೂ ಪದವಿಯನ್ನು ಪಡೆದು ಸಮರ್ಥವಾಗಿ ನಿಭಾಯಿಸಿ ಪುರುಷ ಪ್ರಧಾನ ಸಮಾಜದಲ್ಲಿ ಸಮಾನತೆ ಸಾರಿದ ಮಹಿಳೆಯರು ಮುಂದಿನ ದಿನಗಳಲ್ಲಿ 33 ಪರ್ಸೆಂಟ ಮೀಸಲಾತಿ ಜಾರಿಯಾದರೆ ಮಹಿಳೆಯರಿಗೆ ಅಧಿಕಾರ ಅಡುಗೆ ಮನೆಗೆ ಹುಡುಕಿಕೊಂಡು ಬರಲಿದೆ ಎಂದರು.

ಈ ಸಂದರ್ಭದಲ್ಲಿ ದಿವ್ಯ ಸಾನಿಧ್ಯ ವಹಿಸಿದ್ದ ಮುರುಘರಾಜೇಂದ್ರ ಸ್ವಾಮೀಜಿಗಳು ಸಿದ್ದರಾಮೇಶ್ವರ ಗುರುಮಠ ಯರಡೋಣಿ, ಹಾಗೂ ಸಿದ್ದಲಿಂಗ ಮಹಾಸ್ವಾಮಿಗಳು ಚಿತ್ತರಗಿ ಶ್ರೀ ವಿಜಯಮಹಾಂತೇಶ್ವರ ಶಾಖಾಮಠ ಲಿಂಗಸಗೂರು, ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪೂರ, ಡಾ.ರುದ್ರಗೌಡ ಪಾಟೀಲ, ಎಂ.ಪಿ ಸದಾನಂದ ನಿರ್ದೇಶಕರ ಜನ ಶಿಕ್ಷಣ ಸಂಸ್ಥೆ ರಾಯಚೂರ, ಮಾಜಿ ಪುರಸಭೆ ಅಧ್ಯಕ್ಷೆ ಸುನಿತಾ ಪರಶುರಾಮ ಕೆಂಭಾವಿ, ಸಂಗಮೇಶ ವಸ್ತದ, ಪವಿತ್ರ ಹೂಗಾರ ಕಾರ್ಯಕ್ರಮ ಸಂಯೋಜಕರು, ಸೇರಿದಂತೆ ಅನೇಕ ಗಣ್ಯರು ಹಾಗೂ ಕಲಿಕಾರ್ಥಿಗಳು ಸೇರಿದಂತೆ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

# ರಾಯಚೂರು ಜಿಲ್ಲೆಯ ನ್ಯಾಯಾಲಯಗಳಲ್ಲಿ ಶುಚಿಗೊಳಿಸುವ ವ್ಯಕ್ತಿಗಳ ನೇಮಕಕ್ಕೆ ಅಧಿಸೂಚನೆ

**ರಾಯಚೂರು,ಡಿ.3–** ರಾಯಚೂರು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವಾ ಏಜೆನ್ಸಿಗಳ ಮೂಲಕ, ಶುಚಿಗೊಳಿಸುವ ವ್ಯಕ್ತಿಗಳನ್ನು ನೇಮಿಸಿಕೊಳ್ಳಲು ಇ-ಟೆಂಡರ್ ಅಧಿಸೂಚನೆ ಹೊರಡಿಸಲಾಗಿದೆ.

ಇ–ಟೆಂಡರ್ ಅಧಿಸೂಚನೆಯ ಸಂಖ್ಯೆಯು ಎಚ್‌ಸಿಕೆ/2025–26/ಎಸ್‌ಇಒ115 ದಿ.02.12.2025 ಇದ್ದು, ಅರ್ಜಿಗಳನ್ನು 2025ರ ಡಿಸೆಂಬರ್ 17ರ ಸಂಜೆ 5 ಗಂಟೆಯೊಳಗೆ ಸ್ವೀಕರಿಸಲಾಗುವುದು. ಅರ್ಜಿ ಸಲ್ಲಿಸುವವರು ನಿಯಮಗಳು ಮತ್ತು ಷರತ್ತುಗಳಿಗನುಸಾರ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ರಾಯಚೂರು ನ್ಯಾಯಾಲಯದ ವೆಬ್‌ಸೈಟ್ ವಿಳಾಸ: https://raichur.dcourts.gov.in/notice-category/tenders/ ನ್ನು ಪರಿಶೀಲಿಸಬಹುದಾಗಿದೆ ಎಂದು ರಾಯಚೂರಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಕೀಲರ ವೃತ್ತಿ ಎಂದರೆ ಅದು ಒಂದು ಅನ್ವೇಷಣೆ : ಜಿ. ಚೇತನ್ ಕುಮಾರ್ ವಕೀಲರು

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.3–** ವಕೀಲ ವೃತ್ತಿ ಎಂದರೆ ಅದು ಒಂದು ಸತ್ಯದ ಅನ್ವೇಷಣೆ, ವಕೀಲರು ಸತ್ಯದ ಪರವಾಗಿ ಕಾರ್ಯನಿರ್ವಹಿಸಬೇಕು ಎಂದು ಕಲ್ಮಠ ವಿದ್ಯಾಸಂಸ್ಥೆಯ ಹಳೆಯ ವಿದ್ಯಾರ್ಥಿ ಮತ್ತು ವಕೀಲರಾದ ಜಿ. ಚೇತನ್ ಕುಮಾರ್ ಹೇಳಿದರು.

ಅವರು ಬುಧವಾರ ಪಟ್ಟಣದ ಶ್ರೀ ಪಂಪಾ ವಿರೂಪಾಕ್ಷೇಶ್ವರ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ವಿಶ್ವ ವಿಕಲಚೇತನರ ಹಾಗೂ ವಕೀಲರ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಕೀಲರು ನ್ಯಾಯ ಎತ್ತಿ ಹಿಡಿಯುವಲ್ಲಿ ನಿರ್ಣಾಯಕ ಪಾತ್ರ ವಹಿಸಿರುತ್ತಾರೆ, ಭಾರತದ ಮೊದಲನೆಯ ರಾಷ್ಟ್ರಪತಿ ಡಾ .ಬಾಬು ರಾಜೇಂದ್ರ ಪ್ರಸಾದ್ ಅವರ ಜನ್ಮದಿನದ ಸವಿ ನೆನಪಿಗಾಗಿ ವಕೀಲರ ದಿನಾಚರಣೆ ಆಚರಿಸುತ್ತೇವೆ ಎಂದರು.

ಶಿಕ್ಷಕಿ ರೂಪಾ ವಿಶ್ವ ವಿಕಲಚೇತನರ ದಿನಾಚರಣೆಯ ಕುರಿತು ಮಾತನಾಡಿ ವಿಕಲಚೇತನರನ್ನು ಸಮಾಜದಲ್ಲಿ ಸಮಾನವಾಗಿ ಕಾಣಬೇಕು ಅವರಿಗೆ ಅನುಕಂಪಕ್ಕಿಂತ ಅವಕಾಶ ಮಾಡಿಕೊಡಬೇಕು. ವಿಕಲಚೇತನರಾಗಿದ್ದ ಗದುಗಿನ ಪಂಡಿತ್ ಪುಟ್ಟರಾಜ ಗವಾಯಿಗಳು, ಒಲಂಪಿಕ್ ಆಟಗಾರ್ತಿ ಮಾಲತಿ ಹೊಳ್ಳ ಅರುಣಿಮಾ ಸಿನ್ಹಾ ಅಂತಹವರು ಮಕ್ಕಳಿಗೆ ಆದರ್ಶ ಪ್ರಾಯವಾಗಿರಬೇಕು ಎಂದು ಹೇಳಿದರು.



ಕಲ್ಮಠ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಮಂಜುನಾಥ್ ಕಮತರ್ ವಕೀಲ ದಿನಾಚರಣೆಯ ಕುರಿತು ಮಾತನಾಡಿದರು. ಕಲ್ಮಠ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಅಧ್ಯಕ್ಷತೆ ವಹಿಸಿದರು. ವಿಕಲಚೇತನ ವಿದ್ಯಾರ್ಥಿ ಹುಲಿಗೆಯ್ಯ ಆರನೇ ತರಗತಿ ಅನಿಲ್ ನಾಲ್ಕನೇ ತರಗತಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು

ವಿದ್ಯಾರ್ಥಿಗಳಾದ ಶರಣಬಸವ, ಶ್ರೀ ರಾಮ್, ಪೂಜಾ ,ಸಮಂತ ,ಅನಿಸಿಕೆ ವ್ಯಕ್ತಪಡಿಸಿದರು. ದೈಹಿಕ ಶಿಕ್ಷಣ ಶಿಕ್ಷಕ ಕೇಮ್ಯಾ ನಾಯ್ಕ, ಪವಿತ್ರ, ಮಹಾಂತಮ್ಮ, ಪ್ರಭಾವತಿ, ಎಂ. ಎಂ. ಹಿರೇಮಠ, ಬ್ರಮರಾಂಭ , ನರಸಿಂಹ, ರಾಘವೇಂದ್ರ , ಶಾಂತಸ್ವಾಮಿ ಇತರರು ಭಾಗವಹಿಸಿದ್ದರು.ಕುಮಾರಿ ರಿಜ್ವಾನ ಬೇಗ ಕಾರ್ಯಕ್ರಮ ನಿರೂಪಿಸಿದರು. ಸೃಷ್ಟಿ ಮತ್ತು ಭಾರತಿ ಪ್ರಾರ್ಥಿಸಿದರು . ಕುಮಾರಿ ಸುಜಾತ ಸ್ವಾಗತಿಸಿದರು. ರವಿ ಹುಲಿಯಾಪುರ್ ವಂದಿಸಿದರು.

# ಲಿಂಗಸ್ಗೂರಿನ ತಾಯಿ ಮಕ್ಕಳ ಆಸ್ಪತ್ರೆಗೆ ಹೋಗುವ ಗೇಟಿನ ಮುಂದುಗಡೆ ವಿದ್ಯುತ್ ಕಂಬವಿದ್ದು ಅದನ್ನು ತೆರವುಗೊಳಿಸದೆ ಗ್ರಾಮಸ್ಥರ ಮನವಿ



ಯುವಮಾರ್ಗ ಸುದ್ದಿ

**ಲಿಂಗಸ್ಗೂರು,ಡಿ.3–**ತಾಲೂಕಿನ ತಾಯಿ ಮಕ್ಕಳ ಆಸ್ಪತ್ರೆ ಉದ್ಘಾಟನೆಗೆ ಸಿದ್ಧವಾಗಿದ್ದು ಅದರ ಮುಂಭಾಗದ ರಸ್ತೆಯಿಂದ ಆಸ್ಪತ್ರೆಗೆ ಹೋಗುವ ಗೇಟಿನ ಮುಂದುಗಡೆ ವಿದ್ಯುತ್ ಕಂಬವಿದ್ದು ಅದನ್ನು ತೆರವುಗೊಳಿಸದೆ ಕಾಂಕ್ರೀಟ್ ಹಾಕಿ ಸಿಸಿ ರಸ್ತೆಯನ್ನ ಆಸ್ಪತ್ರೆಯ ಮುಂದಿನ ಗೇಟ್ನಿಂದ ಮೇನ್ ರೋಡ್ ಮಾಡಿರುವುದು ಅನಾಹುತಕ್ಕೆ ಕಾರಣವಾಗಲಿದೆ. ಆಸ್ಪತ್ರೆ ಎಂದರೆ ಆಂಬುಲೆನ್ಸ್ ಗಳು ಇನ್ನಿತರ ವಾಹನಗಳು ಮತ್ತು ತುರ್ತಾಗಿ ರೋಗಿಗಳಿಗೆ ಚಿಕಿತ್ಸೆ ನೀಡಲು ಬರುವಂತಹ ವಾಹನಗಳಿಗೆ ಅನಾನುಕೂಲವಾಗಲಿದ್ದು ಆ ವಿದ್ಯುತ್ ಕಂಬವನ್ನು ಕೂಡಲೇ ಸ್ಥಳಾಂತರಿಸಬೇಕು. ಅದರ ಪಕ್ಕದಲ್ಲಿ ಇರುವಂತ ಇನ್ನೊಂದು ಕಂಬಕ್ಕೂ ಮತ್ತು ಈ ಕಂಬಕ್ಕೂ ಇರುವ ವಿದ್ಯುತ್ ತಂತಿಗಳು ಕೆಳಗಡೆ ಇಳಿ ಬಿದ್ದಿದ್ದು, ಮುಖ್ಯರಸ್ತೆಯ ಪಕ್ಕದಲ್ಲಿಯೇ ಇರುವ ಕಾರಣ ಹುಲ್ಲಿನ ಟ್ಯಾಕ್ಟರ್ ಗಳು ಅಲ್ಲಿಂದ ಹಾದು ಹೋಗುವಾಗ ದೊಡ್ಡ ಅನಾಹುತ ಆಗುವ ಸಾಧ್ಯತೆ ಇದೆ. ತಾಲೂಕಿನ ಜೆಸ್ಕಾಂ ಅಧಿಕಾರಿಗಳು ನಿಷ್ಕ್ರಿಯವಾಗಿರುವುದಕ್ಕೆ ಇದೊಂದು ನಿದರ್ಶನ ಅಂತಾನೆ ಹೇಳಬಹುದು.

ಸಾರ್ವಜನಿಕರೇ ಹಿತದೃಷ್ಟಿಯಿಂದ ಇಳಿಬಿದ್ದಿರುವ ವಿದ್ಯುತ್ ತಂತಿಗಳನ್ನು ಸರಿಪಡಿಸಿ ಆಸ್ಪತ್ರೆಯ ಮುಂಭಾಗದಲ್ಲಿರುವಂತ ವಿದ್ಯುತ್ ಕಂಬವನ್ನು ಸ್ಥಳಾಂತರಿಸಬೇಕೆಂದು ಸಾರ್ವಜನಿಕರ ಕೋರಿಕೆ...ಕೂಡಲೇ ಇಲಾಖೆಯು ಅಧಿಕಾರಿಗಳು ಕ್ರಮವಹಿಸಬೇಕೆಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ...

# ವಿದ್ಯಾರ್ಥಿಗಳು ಪಠ್ಯಪುಸ್ತಕದ ಜೊತೆಗೆ ಕ್ರೀಡೆಗಳಿಗೂ ಮಹತ್ವ ನೀಡಿ ಶಾಸಕ ಹಂಪನಗೌಡ ಬಾದರ್ಲಿ

ಯುವಮಾರ್ಗ ಸುದ್ದಿ

**ಸಿಂಧನೂರು,ಡಿ.3–** ಎಫ್.ಆರ್.ಸಿ.ಎಸ್. ಕ್ಲಬ್, ಸಿಂಧನೂರನಲ್ಲಿ ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ಬೆಂಗಳೂರು, ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ರಾಯಚೂರು. ಆರ್.ಜಿ.ಎಂ. ಪದವಿ ಪೂರ್ವ ಕಾಲೇಜು, ಆಕ್ಸ್‌ಫರ್ಡ್ ಪದವಿ ಪೂರ್ವ ಕಾಲೇಜು, ಎಫ್.ಆರ್.ಸಿ.ಎಸ್ ಕ್ಲಬ್ ಸಿಂಧನೂರು, ಸಿಂಧನೂರು ತಾಲೂಕ ಸರಕಾರಿ ಮತ್ತು ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳು ಸಿಂಧನೂರು ಇವರುಗಳ ಸಂಯುಕ್ತಾಶ್ರಯದಲ್ಲಿ

2025–2026ನೇ ಸಾಲಿನ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಲಾನ್ ಟೆನ್ನಿಸ್ ಪಂದ್ಯಾವಳಿಗಳ ಉದ್ಘಾಟನೆಯನ್ನು ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಮಾಜಿ ಸಂಸದರು ಕೆ ವಿರುಪಾಕ್ಷಪ್ಪನವರು ಲಾಲ್ ಟೆನಿಸ್ ಆಡುವುದರ ಮೂಲಕ ಉದ್ಘಾಟನೆಯನ್ನು ಮಾಡಿದರು.ನಂತರ ಮಾತನಾಡಿದ ಶಾಸಕರು ,ಶಿಕ್ಷಕರು ಮಕ್ಕಳಿಗೆ ಪಠ್ಯವಷ್ಟೇ ಆಸಕ್ತಿ ಬೆಳೆದೇ ಕ್ರೀಡೆಯಲ್ಲೂ ಸಾಧಕರನ್ನಾಗಿ ಸಬೇಕು," ಎಂದು ಶಾಸಕ ಹಂಪನಗೌಡ ಬಾದರ್ಲಿ ಹೇಳಿದರು.ಮಕ್ಕಳಿಗೆ ಕ್ರಿಡೆಗಳಿಗೆ ಸಾಕಷ್ಟು ತರಬೇತಿ ಮತ್ತು ಪಂದ್ಯಗಳಲ್ಲಿಭಾಗವಹಿಸುವ ಅವಕಾಶ ನೀಡಬೇಕು. ಕ್ರಿಡೆಗಳು ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ಹೆಚ್ಚಿಸುವ ಕಾರಣ ಮಕ್ಕಳ ಸರ್ವಾಂಗೀಣ ಪ್ರಗತಿಗೆ ಕಾರಣವಾಗುತ್ತದೆ ಎಂದರು..

ಶಾಲಾ ಶಿಕ್ಷಣ ಇಲಾಖೆ ಕಾಲೇಜು ವಿಭಾಗದ ಉಪನಿರ್ದೇಶಕ ಸೋಮಶೇಖರಪ್ಪ ಹೊಕ್ರಾಣಿ ಮಾತನಾಡಿ, 'ಸಿಂಧನೂರಿನ ಟೆನಿಸ್ ಕ್ಲಬ್ ರಾಜ್ಯದ ಗಮನಸೆಳೆದಿದೆ. ರಾಷ್ಟ್ರಮಟ್ಟದ ಸಿಂಧನೂರಿನಲ್ಲಿ ಆಯೋಜಿಸುವ ಚಿಂತನೆ ನಡೆದಿದೆ. ನಾವು ಹಿಂದುಳಿದ ಜಿಲ್ಲೆಯಲ್ಲಿದ್ದೇವೆ ಎಂಬ ಭಾವನೆ ಈಗಿಲ್ಲ, ಕಾಲ ಬದಲಾದಂತೆ ಬದಲಾವಣೆ ಆಗುತ್ತಿದೆ," ಎಂದರು.

ಮಾಜಿ ಸಂಸದ ಕೆ.ವಿರೂಪಾಕ್ಷಪ್ಪ ಮಾತನಾಡಿದರು.ಶೈಕ್ಷಣಿಕ




ಕ್ಷೇತ್ರದಲ್ಲಿ ಕ್ರೀಡೆಗಳ ಪ್ರಾಮುಖ್ಯತೆ ಬಹಳ ಮುಖ್ಯ ಏಕೆಂದರೆ ಶಿಕ್ಷಣದಲ್ಲಿ ಕ್ರೀಡೆಗಳ ಮಹತ್ವ ಆರೋಗ್ಯಕರ ದೇಹ ಮತ್ತು ಮನಸ್ಸನ್ನು ಬೆಳೆಸುವಲ್ಲಿ ಕ್ರೀಡೆ ಮತ್ತು ವ್ಯಾಯಾಮವು ಪ್ರಬಲ ಸಾಧನವಾಗಿದೆ..ಇದು ಒತ್ತಡವನ್ನು ಕಡಿಮೆ ಮಾಡುತ್ತದೆ ಮತ್ತು ಅವರ ಮನಸ್ಥಿತಿಯನ್ನು ಹೆಚ್ಚಿಸುತ್ತದೆ. ಕ್ರೀಡೆ ಆರೋಗ್ಯಕರ ಮೂಳೆಗಳು ಮತ್ತು ಸ್ನಾಯುಗಳನ್ನು ನಿರ್ಮಿಸುತ್ತದೆ, ಫಿಟ್ನೆಸ್ ಅನ್ನು ಹೆಚ್ಚಿಸುತ್ತದೆ, ನಿದ್ರೆಯನ್ನು ಸುಧಾರಿಸುತ್ತದೆ ಮತ್ತು ಅವರು ಬೆರೆಯಲು ಸಹಾಯ ಮಾಡುತ್ತದೆ.ಕ್ರೀಡೆಗಳನ್ನು ಆಡುವುದರಿಂದ ಮಗುವಿನ ಸ್ವಾಭಿಮಾನ ಮತ್ತು ಆತ್ಮವಿಶ್ವಾಸ ಹೆಚ್ಚಾಗುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಎಆರ್.ಸಿಎಸ್ ಕ್ಲಬ್ ಅಧ್ಯಕ್ಷ ಚಂದ್ರಶೇಖರ ಪಾಟೀಲ್, ಆರ್‌ಜಿಎಂ ಶಿಕ್ಷಣ ಸಂಸ್ಥೆ ಕಾರ್ಯ ದರ್ಶಿ ಆರ್ .ಪದ್ಮನಾಭ್, ಆಕ್ಸರ್ಡ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎನ್.ಸತ್ಯನಾರಾಯಣ ಶ್ರೇಷ್ಠಿ, ತಹಸೀಲ್ದಾರ್ ಅರುಣ್ ಎಚ್.ದೇಸಾಯಿ, ತಾ.ಪಂ. ಇಒ ಚಂದ್ರಶೇಖರ, ಕ್ರೀಡಾ ಸಹಾಯಕ ನಿರ್ದೇಶಕ ಡಾ.ಗುಬ್ಬಿಗೂಡು ರಮೇಶ, ಜಿಲ್ಲಾ ಪ.ಪೂ. ಕಾಲೇಜು ಪ್ರಾಂಶುಪಾಲರ ಸಂಘದ ಕಾರ್ಯದರ್ಶಿ ಡಾ.ಶಿವರಾಜ ಎಸ್.. ಪಾಟೀಲ್ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಶ್ರೀ ಮಹರ್ಷಿ ವಾಲ್ಮೀಕಿ ವಿವಿ ವಿದ್ಯಾವಿಷಯಕ ಪರಿಷತ್ ಸದಸ್ಯ ಆರ್.ಅನಿಲಕುಮಾರ , ಸಿಂಧನೂರು ತಾಲೂಕ ಸರ್ಕಾರಿ ಮತ್ತು ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳ ಉಪನ್ಯಾಸಕರು ಆಡಳಿತ ಮಂಡಳಿಯವರು ವಿದ್ಯಾರ್ಥಿಗಳು ಹಾಗೂ ಇತರರಿದ್ದರು.

# ಬಾಲ್ಯ ವಿವಾಹ ನಿಷೇಧದ ಕಾನೂನು ಮತ್ತು ರುಕ್ಮಾಬಾಯಿ ಎಂಬ ದಿಟ್ಟ ಮಹಿಳೆ

ಅದು 1887ರ ಸಮಯ. ಮುಂಬೈಯ ಹೈಕೋರ್ಟ್ ಆ ಮಹಿಳೆಗೆ ಎರಡು ಆಯ್ಕೆಗಳನ್ನು ನೀಡಿತು. ಬಾಲ್ಯದಲ್ಲಿ ನಿನ್ನನ್ನು ವಿವಾಹವಾದ ವ್ಯಕ್ತಿಯೊಂದಿಗೆ ಹೋಗಿ ಬದುಕನ್ನು ಕಟ್ಟಿಕೋ, ಇಲ್ಲವೇ ಜೈಲಿಗೆ ಹೋಗು ಎಂದು. ಆಕೆ ಜೈಲಿಗೆ ಹೋಗಲು ತಯಾರಾದಳು.

ಆಕೆಯ ಉತ್ತರ ಎಲ್ಲರಿಗೂ ದಿಗ್ಭ್ರಾಂತಿಯನ್ನು ಉಂಟು ಮಾಡಿತು. ಕೇವಲ ಭಾರತ ದೇಶವನ್ನು ಮಾತ್ರವಲ್ಲದೆ ಅಂದಿನ ಭಾರತ ದೇಶವನ್ನು ಆಳುತ್ತಿದ್ದ ಇಂಗ್ಲೆಂಡ್ ದೇಶದವರೆಗೆ ಈ ವಿಷಯದ ಕುರಿತ ಚರ್ಚೆ ಮುಂದುವರೆದು ಕಾನೂನಿನ ಕ್ರಮದಲ್ಲಿ ಬದಲಾವಣೆಯನ್ನು ಕೈಗೊಂಡು ನಂತರದ ಕೋಟ್ಯಾಂತರ ಹೆಣ್ಣುಮಕ್ಕಳ ಪಾಲಿಗೆ ವರದಾನವಾಯಿತು. ಕೇವಲ ಒಬ್ಬ ಹೆಣ್ಣು ಮಗಳ ದಿಟ್ಟ ನಿರ್ಧಾರ ಒಂದು ಇಡೀ ಬ್ರಿಟೀಷ್ ಸಾಮ್ರಾಜ್ಯವನ್ನು ಮೊಳಕಾಲೂರಿ ನಿಲ್ಲುವಂತೆ ಮಾಡಿತು. ಆ ಹೆಣ್ಣು ಮಗಳೇ ರುಕ್ಮಾಬಾಯಿ.

1864 ರಲ್ಲಿ ಮುಂಬೈಯಲ್ಲಿ ಜಯಂತಿ ಬಾಯಿ ಎಂಬ ಹೆಣ್ಣು ಮಗಳನ್ನು ಕೇವಲ 14 ವರ್ಷ ವಯಸ್ಸಿನಲ್ಲಿಯೇ ಮದುವೆ ಮಾಡಿಕೊಡಲಾಯಿತು. ತನ್ನ 15ನೇ ವಯಸ್ಸಿಗೆ ಆಕೆ ಹೆಣ್ಣು ಮಗುವೊಂದನ್ನು ಹಡೆದಳು ಹಾಗೂ 17ನೇ ವಯಸ್ಸಿಗೆ ಗಂಡನನ್ನು ಕಳೆದುಕೊಂಡು ವಿಧವೆಯಾದಳು. ಮುಂದೆ ತನ್ನ ಮಗಳು ಎಂಟು ವರ್ಷದವಳಿದ್ದಾಗ ಆಕೆಯ ತಾಯಿ ಡಾ. ಸಖಾರಾಮ್ ಅರ್ಜುನ್ ಎಂಬ ವೃತ್ತಿಯಿಂದ ತಜ್ಞ ವೈದ್ಯ ಹಾಗೂ ಪ್ರವೃತ್ತಿಯಿಂದ ಸಮಾಜ ಸುಧಾರಕರಾಗಿದ್ದ ವ್ಯಕ್ತಿಯನ್ನು ವಿವಾಹವಾದಳು. ತನ್ನ ಕಾಲದ ಪುರುಷ ಸಮಾಜದ ಯೋಚನೆಗಳಿಗಿಂತ ವಿಭಿನ್ನವಾಗಿ ಯೋಚಿಸುತ್ತಿದ್ದ ಡಾ. ಸಖಾರಾಮ್ ಹೆಣ್ಣು ಮಕ್ಕಳು ಸುಶಿಕ್ಷಿತರಾಗಬೇಕು ಎಂದು ಬಯಸುತ್ತಿದ್ದರು. ತನ್ನ ಮನೆಯ ತುಂಬಾ ಪುಸ್ತಕಗಳನ್ನು ಜೋಡಿಸಿದ್ದ ಆತ ರುಕ್ಮಬಾಯಿಗೆ ಓದಿನಲ್ಲಿ ಆಸಕ್ತಿಯನ್ನು ವಹಿಸಲು ಪ್ರೋತ್ಸಾಹಿಸಿದ.ಸಮಾಜ ಸುಧಾರಕನಾದರೂ ಕೂಡ ಆತನಿಗೂ ಕೂಡ ತನ್ನದೇ ಆದ ಕೆಲವು ಸಾಮಾಜಿಕ ಮಿತಿಗಳು ಇದ್ದವು.

ಅಂತೆಯೇ ರುಕುಮಾ ಬಾಯಿ 11 ವರ್ಷದವಳಾದಾಗ ಆಕೆಗೆ 19ರ ಹರಯದ ದಾದಾ ಜೀ ಭಿಕಾಜಿ ಎಂಬ ವ್ಯಕ್ತಿಯೊಡನೆ ಜಯಂತಿ ಬಾಯಿಯ ತಂದೆ ಸನಾತನ ಕಾಲದಿಂದಲೂ ಆಚರಿಸುತ್ತಿದ್ದ ರೀತಿಯಲ್ಲಿ ಎಲ್ಲ ಭಾರತೀಯ ಸಂಪ್ರದಾಯಗಳನ್ನು ಪಾಲಿಸಿ ಮದುವೆ ಮಾಡಿದರು.

ಪುಟ್ಟ ಬಾಲಕಿಯಾದ ಆಕೆಗೆ ಯಾವುದೇ ರೀತಿಯ ಆಯ್ಕೆಗಳಾಗಲಿ, ಮದುವೆ ಮಾಡಿಕೊಳ್ಳಲು ಒಲ್ಲೆ ಎಂದು ಹೇಳುವ ಧೈರ್ಯವಾಗಲಿ ಇರಲಿಲ್ಲ. ಮೌನ ಒಪ್ಪಿಗೆ ಆಕೆಯದಾಗಿತ್ತು.ಅಂದಿನ ಸಮಾಜದ ನಿಯಮಾವಳಿಗಳ ಪ್ರಸಾರ ಮದುವೆ ಆದ ನಂತರವೂ ಕೂಡ ಋತುಮತಿಯಾಗುವವರೆಗೆ ತನ್ನ ತವರು ಮನೆಯಲ್ಲಿಯೇ ಉಳಿಯಬೇಕಾದ ಕಾರಣ ಆಕೆ ತನ್ನ ಶಿಕ್ಷಣವನ್ನು ರಹಸ್ಯವಾಗಿಯೇ ಮುಂದುವರಿಸಿದಳು.

ಆಕೆಯನ್ನು ಮದುವೆಯಾದ ವ್ಯಕ್ತಿ ಅಂದಿನ ಸಾಮಾಜಿಕ ನೀತಿ ನಿಯಮಾವಳಿಗೆ ಬದ್ಧನಾಗಿದ್ದ. ತನ್ನ ಶಿಕ್ಷಣವನ್ನು ಪೂರೈಸಿದ ರುಕ್ಮಭಾಯಿ ಅತ್ಯಂತ ಜಾಣ ಹಾಗೂ ಸಂಸ್ಕಾರವಂತ ಹೆಣ್ಣುಮಗಳಾಗಿ ಪರಿವರ್ತಿತಳಾಗಿದ್ದರು. ಆಕೆಯಲ್ಲಿ ಆಧುನಿಕ ವಿಚಾರಧಾರೆಗಳ ಪ್ರಭಾವದಿಂದ ತನ್ನದೇ ಆದ ವೈಯುಕ್ತಿಕ ಅಭಿಪ್ರಾಯಗಳು ಹರಳುಗಟ್ಟಿದ್ದವು. ಅಂದಿನ ಕಾಲದ ಇತರ ಸಮಾಜ ಸುಧಾರಕರೊಂದಿಗಿನ ಭೇಟಿ, ಅಭಿಪ್ರಾಯ, ವಿಚಾರ ವಿನಿಮಯಗಳು, ಚರ್ಚೆಗಳು, ಭಾಷಣಗಳು, ಉಪನ್ಯಾಸಗಳು ಆಕೆಯ ಮೇಲೆ ಪರಿಣಾಮವನ್ನು ಬೀರಿದ್ದವು.

ಆಕೆಯ ಪತಿ ದಾದಾಜಿ ತನ್ನ ಸೋಮಾರಿತನದ ಕಾರಣದಿಂದ ಶಾಲೆಯಿಂದ ಹೊರ ಹಾಕಲ್ಪಟ್ಟಿದ್ದ ಹಾಗೂ ಸಾಲದ ಸುಳಿಯಲ್ಲಿ ಸಿಲುಕಿದ್ದ. ದುಶ್ಚಟಗಳಿಗೆ ದಾಸನಾದ ಆತನ ಚಿಕ್ಕಪ್ಪನ ಕುಮ್ಮಕ್ಕು ಕೂಡ ಆತನಿಗಿತ್ತು.ತನ್ನೆಲ್ಲ ಆರ್ಥಿಕ ತೊಂದರೆಗಳನ್ನು ನಿವಾರಿಸಲು ತನ್ನ ಪತ್ನಿಯ ತವರು ಮನೆ ಆತನ ಪಾಲಿಗೆ ಅಲ್ಲಾವುದ್ದೀನನ ದೀಪವಾ ಗಲಿ ಎಂಬುದು ಆತನ ಬಯಕೆ ಯಾಗಿತ್ತು.

1884 ರಲ್ಲಿ 20 ವರ್ಷದ ರುಕು ಮಾಬಾಯಿಯನ್ನು ಆತ ತನ್ನೊ ಂದಿಗೆ ಬಂದು ವಾಸಿಸಲು ಕೇಳಿ ಕೊಂಡ... ಆದರೆ ಆತನ ಕೆಟ್ಟ ಚಟಗಳ ಕುರಿತು ಅರಿವಿದ್ದ ಆಕೆ ಆತನ ಕೋರಿಕೆಯನ್ನು ಸಾರಾ ಸಗಟಾಗಿ ನಿರಾಕರಿಸಿದಳು. ಆಕೆ ಯನ್ನು ಪತ್ನಿಯಾಗಿ ಮನೆ ತುಂಬಿಸಿಕೊಂಡು ತನ್ನೆಲ್ಲ ಸಮಸ್ಯೆಗಳಿಗೆ ಉತ್ತರ ಕಂಡುಕೊಳ್ಳಬೇಕು ಎಂದು ಆಶಿಸಿದ್ದ ದಾದಾಜಿ ಶತಾಯಗತಾಯ ಆಕೆಯನ್ನು ಹೊಂದಲೇಬೇಕೆಂಬ ಹಟದಿಂದ ನ್ಯಾಯಾಲಯದ ಮೊರೆ ಹೊಕ್ಕ.



19ನೇ ಶತಮಾನದಲ್ಲಿ ಸಾರ್ವಜನಿಕವಾಗಿ ಅತ್ಯಂತ ಚರ್ಚೆಗೆ ಒಳಗಾದ ಕಾನೂನು ಹೋರಾಟ ದಾದಾಜಿ ಮತ್ತು ರುಕ್ಮಬಾಯಿ ಅವರದಾಗಿತ್ತು. ದಾದಾ ಜೀ ದಾಂಪತ್ಯದ ಹಕ್ಕುಗಳ ಮರುಸ್ಥಾಪನೆಯ ಪ್ರಾಸ್ಟಿಟ್ಯೂಷನ್ ಆಫ್ ಕಾಂಜುಗಲ್ ರೈಟ್ಸ್ ದಾವೆಯನ್ನು ಪತ್ನಿಯ ಮೇಲೆ ಹೂಡಿದ್ದ. ಈ ಹಕ್ಕಿನ ಪ್ರಕಾರ ಪತ್ನಿ ಆತನ ಸೊತ್ತಾಗಿದ್ದು ಕಾನೂನು ಆಕೆ ತನ್ನ ಪತಿಯ ಜೊತೆಯಲ್ಲಿ ಬಾಳುವೆ ಮಾಡಬೇಕು ಎಂದು ಸೂಚಿಸಿತು.

ಇದಕ್ಕೆ ರುಕ್ಮಾ ಬಾಯಿಯ ಉತ್ತರ ಹೀಗಿತ್ತು... ಅರಿಯದ ಅಬೋಧ ವಯಸ್ಸಿನಲ್ಲಿ ತನಗೆ ಮದುವೆ ಮಾಡಿಕೊಡಲಾಗಿದ್ದು ತಾನು ಅಸಹಾಯಕಳಾಗಿದ್ದೆ. ಮದುವೆ ಎಂದರೆ ಏನು ಎಂಬುದೇ ತನಗೆ ಗೊತ್ತಿರಲಿಲ್ಲ. ಅದೂ ಅಲ್ಲದೆ ಹೆಣ್ಣುಮಕ್ಕಳನ್ನು ಹೊಲ ಮನೆ,ದನ ಕರು ಒಡವೆಗಳ ರೀತಿಯಲ್ಲಿ ಆಸ್ತಿಯಂತೆ ಭಾವಿಸಬಾರದು ಎಂದು ಆಕೆ ವಾದ ಹೂಡಿದಳು. ಹೆಣ್ಣು ಮಕ್ಕಳು ಪುರುಷರಷ್ಟೇ ಸರಿ ಸಮಾನವಾಗಿ ಬದುಕುವ ಕಣ್ಣು ಹೊಂದಿದ್ದಾರೆ ಅವರನ್ನು ತಮ್ಮ ಹಕ್ಕಿನ ಸೊತ್ತಾಗಿ ಬೇರೆಯವರು ಭಾವಿಸಬಾರದು ಎಂದು ಆಕೆ ನ್ಯಾಯಾಲಯವನ್ನು ಒತ್ತಾಯಿಸಿದಳು.

ಇದಕ್ಕೂ ಮುನ್ನ ಈ ರೀತಿ ಹೆಣ್ಣು ಮಕ್ಕಳ ಹಕ್ಕಿನ ಕುರಿತಾಗಿ ನ್ಯಾಯಾಲಯದ ಮುಂದೆ ಯಾರೂ ಹಕ್ಕೊತ್ತಾಯವನ್ನು ಮಂಡಿಸಿರಲಿಲ್ಲ.

1885ರಲ್ಲಿ ಜಸ್ಟಿಸ್ ರಾಬರ್ಟ್ ಪಿನ್ಹೇ ಆಕೆಯ ಅಭಿಪ್ರಾಯಕ್ಕೆ ಮನ್ನಣೆ ನೀಡಿ ತಾವು ಪಾಲಿಸುತ್ತಿರುವ ಬ್ರಿಟಿಷ್ ಕಾನೂನು ಬಾಲ್ಯ ವಿವಾಹ ಮಾಡಲ್ಪಟ್ಟ ಅಬೋಧ ರುಕ್ಮಭಾಯಿಗೆ ಸಂಬಂಧ ಪಡುವುದಿಲ್ಲ ಎಂದು ತೀರ್ಪು ನೀಡಿತು.

ಸಂಪ್ರದಾಯವಾದಿ ಭಾರತೀಯರು ಸಿಡಿದೆದ್ದರು. ಹಿಂದೂ ರೀತಿ ರಿವಾಜುಗಳನ್ನು ಪ್ರಶ್ನಿಸುವ ನ್ಯಾಯಾಲಯದ ವಿರುದ್ಧ ಸನಾತನವಾದಿಗಳು ದನಿಯೆತ್ತಿದರು.ಉಕ್ಕಿನ ಮನುಷ್ಯ ಎಂದೇ ಭಾರತೀಯ ಸ್ವತಂತ್ರ ಇತಿಹಾಸದಲ್ಲಿ ಹೆಸರಾದ ಬಾರ್ಡೋಲಿಯ ಸರದಾರ ಬಾಲಗಂಗಾಧರನಾಥ ತಿಲಕ್ ಅವರು ರುಕ್ಮಾಭಾಯಿಯ ಆಂಗ್ಲ ಶಿಕ್ಷಣದ ಪರಿಣಾಮವೇ ಆಕೆಯ ಈ ತೀರ್ಮಾನಕ್ಕೆ ಕಾರಣ ಎಂದು ಹೇಳಿದರು

ಭಾರತದ ಹಿಂದುತ್ವ ಅಪಾಯದಲ್ಲಿದೆ ಎಂದು ಸಾರ್ವಜನಿಕರು ಕೂಗು ಹಾಕಿದರು . 1886 ರಲ್ಲಿ ಮತ್ತೆ ಮರುಪರಿಶೀಲನೆಗೆ ಒಳಪಟ್ಟ ತೀರ್ಪನ್ನು ಹೆಚ್ಚುವರಿ ನ್ಯಾಯಾಲಯದ ಅಂದಿನ ಜಡ್ಜ್ ಆಗಿದ್ದ ಜಸ್ಟಿಸ್ ಫರಾನ್ ಅವರು ರುಕ್ಮಬಾಯಿ ಮರಳಿ ತನ್ನ ಪತಿಯ ಮನೆಗೆ ಹೋಗಬೇಕು ಇಲ್ಲವೇ ಆರು ತಿಂಗಳ ಕಾಲ ಕಾರಾಗ್ರಹ ವಾಸವನ್ನು ಅನುಭವಿಸುವ ನಿಟ್ಟಿನಲ್ಲಿ ಜೈಲಿಗೆ ಹೋಗಬೇಕು ಎಂದು ಆದೇಶವ ನ್ನು ಹೊರಡಿಸಿದರು.

ಇದೀಗ ರುಕ್ಮಭಾಯಿತಾನು ಜೈಲಿಗೆ ಹೋದರೂ ಪರವಾಗಿಲ್ಲ, ಆದರೆ ತನ್ನ ಒಪ್ಪಿಗೆ ಇಲ್ಲದೆ ಮಾಡಿದ ವಿವಾಹವನ್ನು ಹಾಗೂ ವಲ್ಲದ ಗಂಡನೊಂದಿಗಿನ ಬದುಕನ್ನು ನಡೆಸಲಾರೆ ಎಂಬ ಹೇಳಿಕೆ ನೀಡಿ ದ್ದು ಐತಿಹಾಸಿಕ ಸಮರ್ಥನೆಯಾ ಯಿತು. ಆಕೆಯ ಮಾತುಗಳು, ಕೇಸಿನ ವಿವರಗಳು ಸಮುದ್ರಗಳ ನ್ನು ದಾಟಿ ಬ್ರಿಟಿಷ್ ವರ್ತಮಾನ ಪತ್ರಿಕೆಗಳಲ್ಲಿ ಪ್ರಕಟವಾದವು. ಇಂಗ್ಲೆಂಡಿನ ಪ್ರಸಿದ್ಧ ಮಹಿಳಾ ನಿಯತಕಾಲಿಕವೊಂದು ರುಕ್ಮಾಬಾಯಿಯ ನಿಲುವನ್ನು ಸಮರ್ಥಿಸಿತು, ಮಾತ್ರವಲ್ಲದೇ ಪ್ರಸಿದ್ಧ ತತ್ವಜ್ಞಾನಿಯಾಗಿದ್ದ ಮ್ಯಾಕ್ಸ್ ಮುಲ್ಲರ್ ರುಕ್ಮಾಭಾಯಿಯ ಆಂಗ್ಲ ಶಿಕ್ಷಣವು ಆಕೆಗೆ ತನ್ನ ಆಯ್ಕೆಗಳ ಕುರಿತು ಸ್ಪಷ್ಟ ನಿಲುವನ್ನು ಹೊಂದಲು ಮತ್ತು ನಿರ್ಣಯಗಳನ್ನು ಕೈಗೊಳ್ಳಲು ಅತ್ಯುತ್ತಮ ನ್ಯಾಯಾಧೀಶನಂತೆ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿಕೆ ನೀಡಿದರು.

ಇದೇ ಸಮಯದಲ್ಲಿ ರುಕ್ಮಾಬಾಯಿ ಅನಾಮಿಕವಾಗಿ ದಿ ಹಿಂದೂ ಲೇಡಿ ಎಂಬ ಹೆಸರಿನಲ್ಲಿ ಟೈಮ್ಸ್ ಆಫ್ ಇಂಡಿಯಾ ನಿಯತಕಾಲಿಕಕ್ಕೆ ಬಾಲ್ಯ ವಿವಾಹವನ್ನು ವಿರೋಧಿಸುವ ನಿಟ್ಟಿನಲ್ಲಿ ಲೇಖನಗಳನ್ನು ಬರೆಯಲು ಆರಂಭಿಸಿದ್ದಳು. ತನ್ನ 14ನೇ ಹುಟ್ಟುಹಬ್ಬಕ್ಕೆ ಮುನ್ನವೇ ಮಕ್ಕಳನ್ನು ಪಡೆಯಲು ಹೆಣ್ಣು ಮಕ್ಕಳನ್ನು ಒತ್ತಾಯಿಸುವ ಸಂಪ್ರದಾಯವನ್ನು ವಿರೋಧಿಸಿ ಆಕೆ ಬರೆದಳು. ಕನಸುಗಳ ಸಾವಿನ ಕುರಿತು ಹೆಣ್ಣು ಮಕ್ಕಳ ಅಂತಃಸತ್ವವನ್ನು ಹೀರಿ ಎಸೆಯುವ, ಅವರ ಬಾಲ್ಯವನ್ನು ಕಸಿಯುವ ಕುರಿತು ಆಕೆ ಬರೆದ ಲೇಖನಗಳು ಬುದ್ಧಿವಂತರ, ವಿಚಾರ ಜೀವಿಗಳ ಮನಸ್ಸನ್ನು ತಾಕಿದವು.

ಬಾಲ್ಯವಿವಾಹದಂತಹ ಕೆಟ್ಟ ಸಂಪ್ರದಾಯವು ನನ್ನ ಜೀವನದ ಎಲ್ಲಾ ಸಂತೋಷಗಳನ್ನು ಕಸಿದುಕೊಂಡಿತ್ತು ಎಂದು ಆಕೆ ಬರೆದಳು. ನನ್ನ ಬದುಕಿನಲ್ಲಿ ವಿವಾಹವು ನನ್ನ ವಿದ್ಯೆ ಮತ್ತು ಮಾನಸಿಕ ಬೆಳವಣಿಗೆಗೆ ಅಡ್ಡ ಬಂದಿತು ಎಂದು ಹೇಳಿದ ಆಕೆ ಅಂದು ಬ್ರಿಟನ್ ಸಾಮ್ರಾಜ್ಯವನ್ನು ಆಳುತ್ತಿದ್ದ ರಾಣಿ ವಿಕ್ಟೋರಿಯಾಗೆ ಪತ್ರ ಬರೆದು ತನಗೆ ನ್ಯಾಯ ದೊರಕಿಸಿಕೊಡಲು ಕೇಳಿಕೊಂಡಳು. ಹಿಂದೂ ಕಾನೂನಿನಲ್ಲಿ ವೈವಾಹಿಕ ವಯಸ್ಸನ್ನು ಹೆಣ್ಣು ಮಕ್ಕಳಿಗೆ 15 ವರ್ಷ ಮೇಲ್ಪಟ್ಟು ಹಾಗೂ ಗಂಡು ಮಕ್ಕಳಿಗೆ 20 ವರ್ಷ ಮೇಲ್ಪಟ್ಟ ವಯಸ್ಕರಿಗೆ ಮಾಡುವ ಮೂಲಕ ಬಾಲ್ಯ ವಿವಾಹವನ್ನು ನಿಷೇಧಿಸಲು ಕೋರಿಕೊಂಡಳು.ಬಾಲ್ಯ ವಿವಾಹವನ್ನು ನಿಷೇಧಿಸುವ ಮೂಲಕ ಹಿಂದೂ ಯುವತಿಯರಿಗೆ ಮಹದುಪಕಾರ ಮಾಡಿ ಎಂದು ಕೇಳಿಕೊಂಡಳು.

1888 ರಲ್ಲಿ ಅಂತಿಮವಾಗಿ ಒಂದು ಒಪ್ಪಂದಕ್ಕೆ ಬರಲಾಯಿತು.2 ಸಾವಿರ ರೂ ಹಣವನ್ನು ದಾದಾಜಿಗೆ ನೀಡುವ ಮೂಲಕ ಮದುವೆಯನ್ನು ರದ್ದುಗೊಳಿಸುವ ಹಾಗೂ ರುಕ್ಮಾಭಾಯಿಯ ಮೇಲೆ ಹೊರಿಸಿರುವ ಎಲ್ಲ ಮೊಕದ್ದಮೆಗಳನ್ನು ಹಿಂತೆಗೆದುಕೊಳ್ಳುವ ಒಪ್ಪಂದವಾಗಿತ್ತದು. ಅಂತಿಮವಾಗಿ ಆಕೆ ಪಂಜರದಿಂದ ಹೊರ ಬಿಟ್ಟ ಪಕ್ಷಿಯಾದಳು.ಇಲ್ಲಿಗೆ ಆಕೆಯ ಕಥೆ ಮುಗಿಯಲಿಲ್ಲ.

ಇಂಗ್ಲೆಂಡಿನ ಡಾಕ್ಟರ್ ಎಡಿತ್ ಪೆಚ್ಚಿ ಎಂಬ ತಜ್ಞ ವೈದ್ಯರ ಸಹಾಯ ಮತ್ತು ಸಹಕಾರದಿಂದ 1894 ರಲ್ಲಿ ಆಕೆ ವೈದ್ಯಕೀಯ ಪದವಿ ಪಡೆಯಲು ಇಂಗ್ಲೆಂಡಿಗೆ ತೆರಳಿದಳು. ಮಹಿಳೆಯರಿಗಾಗಿಯೇ ಇದ್ದ ಲಂಡನ್ ಸ್ಕೂಲ್ ಆಫ್ ಮೆಡಿಸಿನ್ ನಲ್ಲಿ ಆಕೆ ಓದಿ ವೈದ್ಯಕೀಯ ಪದವಿಯನ್ನು ಪಡೆದಳು. ಮುಂದೆ ಮರಳಿ ಭಾರತಕ್ಕೆ ಬಂದ ಆಕೆ ವೈದ್ಯಕೀಯ ಚಿಕಿತ್ಸಕಳಾಗಿ ಕರ್ತವ್ಯ ನಿರ್ವಹಿಸುವ ಮಹಿಳಾ ವೈದ್ಯೆ ಎಂದು ರಾಷ್ಟ್ರದ ಇತಿಹಾಸದಲ್ಲಿ ದಾಖಲಾದಳು.

ಮುಂದಿನ 35 ವರ್ಷಗಳ ಕಾಲ ರುಕ್ಮಭಾಯಿ ಸೂರತ್ ಮತ್ತು ರಾಜಕೋಟ್ಗಳಲ್ಲಿ ಮುಖ್ಯ ವೈದ್ಯಕೀಯ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದರು. ಎಲ್ಲ ಜಾತಿ, ವರ್ಗಗಳ ಜನರ ಚಿಕಿತ್ಸೆಯನ್ನು ಕೈಗೊಂಡ ಆಕೆ ಸಾಕಷ್ಟು ಹೆಣ್ಣು ಮಕ್ಕಳಿಗೆ ನರ್ಸಿಂಗ್ ಕ್ಷೇತ್ರದಲ್ಲಿ ತರಬೇತಿ ನೀಡಿದಳು. ಮತ್ತೆ ನೂರಾರು ಹೆಣ್ಣು ಮಕ್ಕಳಿಗೆ ಶುಶ್ರೂಷೆ ಮತ್ತು ಸ್ವಚ್ಛತೆಯ ಕುರಿತು ತರಬೇತಿ ನೀಡಿ ಅವರನ್ನು ಆಯಕಟ್ಟಿನ ಸ್ಥಳಗಳಲ್ಲಿ ಕಾರ್ಯನಿರ್ವಹಿಸಲು ಪ್ರೋತ್ಸಾಹಿಸಿದರು. ಮಾರಣಾಂತಿಕ ಕಾಯಿಲೆಗಳು ದೇಶದಲ್ಲಿ ತಾಂಡವವಾಡುತ್ತಿದ್ದಾಗಲೂ ಆಕೆ ಸಾವಿಗೆ ಅಂಜದೆ, ರೋಗಕ್ಕೆ ಹಿಂಜರಿದು ಧೈರ್ಯಗೆಡದೆ ತಾನೇ ಮುಂಚೂಣಿಯಲ್ಲಿ ನಿಂತು ರೋಗಿಗಳನ್ನು ತಪಾಸಿಸಿ ಸೂಕ್ತ ಚಿಕಿತ್ಸೆ ನೀಡಿ ಗುಣಮುಖರನ್ನಾಗಿಸಿದಳು.

ಹೋರಾಟ ಆಕೆಯ ಬದುಕಿನ ಅವಿಭಾಜ್ಯ ಅಂಗವಾಗಿದ್ದು ತನ್ನ ವೃತ್ತಿ ಜೀವನದಿಂದ ನಿವೃತ್ತಿಯಾದ ನಂತರವೂ ಕೂಡ ಆಕೆ ಪರ್ದಾ ಪದ್ಧತಿಯನ್ನು ವಿರೋಧಿಸಿ ಹೆಣ್ಣು ಮಕ್ಕಳಲ್ಲಿ ಜಾಗೃತಿಯನ್ನು ಮೂಡಿಸಿದರು. ಭಾರತೀಯ ಸಭ್ಯತೆಯ ಹೆಸರಿನಲ್ಲಿ ಹೆಣ್ಣು ಮಕ್ಕಳನ್ನು ಬಲವಂತದಿಂದ ಮನೆಯಲ್ಲಿ ಕೂಡಿ ಹಾಕುವುದನ್ನು ವಿರೋಧಿಸಿ ಆಕೆ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗುವಂತಹ ಶಾಲೆಯನ್ನು ತೆರೆಯಲು ತನ್ನ ಮನೆಯನ್ನೇ ಬಿಟ್ಟುಕೊಟ್ಟಳು.

ಅಂದು ತನ್ನ ಇಪ್ಪತ್ತನೇ ವಯಸ್ಸಿನಲ್ಲಿ ರುಕ್ಮಬಾಯಿ ತೆಗೆದುಕೊಂಡ ಒಂದು ದಿಟ್ಟ ನಿರ್ಧಾರದ ಪರಿಣಾಮವಾಗಿ ತಲೆ ತಲೆಮಾರುಗಳ ಹೆಣ್ಣು ಮಕ್ಕಳು ನೆಮ್ಮದಿಯ ಬಾಲ್ಯವನ್ನು ಕಳೆಯಲು ಸಾಧ್ಯವಾಗಿದೆ.

1888 ರ ರುಕುಮಾಬಾಯಿ ಮೊಕದ್ದಮೆಯ ಐತಿಹಾಸಿಕ ತೀರ್ಪಿನ ಮೂರು ವರ್ಷಗಳ ನಂತರ 1891ರಲ್ಲಿ ಬ್ರಿಟಿಷ್ ಸರ್ಕಾರವು ' ದ ಏಜ್ ಆಫ್ ಕನ್ಸೆಂಟ್ ಆಕ್ಟ್' ಅನ್ನು ಜಾರಿ ಮಾಡಿತು. ನಿರ್ದಿಷ್ಟ ವಿಷಯಗಳ ಕುರಿತು ತೀರ್ಮಾನವನ್ನು ಕೈಗೊಳ್ಳುವ ಹಕ್ಕನ್ನು ನೀಡಲಾಯಿತು. ವೈವಾಹಿಕ ವಯಸ್ಸಿನ ಮಿತಿಯನ್ನು ಹೆಚ್ಚಿಸಲಾಯಿತು.

ರುಕ್ಮಾಭಾಯಿಯ ಮೊಕದ್ದಮೆಯು ಮೊಟ್ಟಮೊದಲ ಬಾಲ್ಯ ವಿವಾಹ ವಿರುದ್ಧದ ಪ್ರಕರಣ ಎಂದು ದಾಖಲಾಯಿತು, ಆದರೆ ಅದುವೇ ಕೊನೆಯ ಪ್ರಕರಣವಾಗಬೇಕಿತ್ತು... ದುರ್ದೈವವಶಾತ್ ಇಂದಿಗೂ ಕೂಡ ಬಾಲ್ಯ ವಿವಾಹ ತೆರೆ ಮರೆಯಲ್ಲಿ ನಡೆಯುತ್ತಲೇ ಇವೆ ಹಾಗೂ ಅದರ ಪರಿಣಾಮವಾಗಿ ಹೆಣ್ಣು ಮಕ್ಕಳು ಅಪ್ರಾಪ್ತ ವಯಸ್ಸಿನಲ್ಲಿ ಅನಿರೀಕ್ಷಿತ ಗರ್ಭ ಧರಿಸುವಿಕೆ, ಹೆರಿಗೆಯಲ್ಲಿ ಸಾವು, ತಾನೇ ಒಂದು ಮಗುವಾಗಿ ತನ್ನಲ್ಲಿ ಆ ಸಾಮರ್ಥ್ಯ ಇಲ್ಲದೆ ಇದ್ದಾಗಲೂ ಕೂಡ ತನ್ನದೇ ಮಗುವನ್ನು ಹೆರುವ, ಹೊರುವ ಜವಾಬ್ದಾರಿಯನ್ನು ನಿರ್ವಹಿಸುತ್ತಲೇ ಬಂದಿದ್ದಾರೆ. ಮತ್ತೆ ಕೆಲವರು ಸೋತು ಸತ್ತು ಹೋಗಿದ್ದಾರೆ. ಬದುಕಿದವರು ಸಾವನ್ನು ಗೆದ್ದರೂ ಕೂಡ ನಿರಂತರ ದೈಹಿಕ ತೊಂದರೆಗಳನ್ನು ಎದುರಿಸುತ್ತಿದ್ದಾರೆ.

ಸಪ್ಟಂಬರ್ 25 1955 ರಲ್ಲಿ ತನ್ನ 90ನೇ ವಯಸ್ಸಿನಲ್ಲಿ ರುಕ್ಮಭಾಯಿ ವಯೋ ಸಹಜ ತೊಂದರೆಗಳಿಂದಾಗಿ ಮೃತರಾದರು. ನೂರು ಅವಮಾನಗಳನ್ನು ಸಹಿಸಿ, ವಲ್ಲದ ಗಂಡನನ್ನು ದೂರಸರಿಸಿ ತನ್ನಿಚೆಯ ಬದುಕನ್ನು

ರುಕ್ಮಾ ಬಾಯಿ ಬದುಕಿದರು. ತನ್ನ ದೇಶವನ್ನು ಆಳಿದ ಬ್ರಿಟಿಷ್ ಸಾಮ್ರಾಜ್ಯವನ್ನು ಪ್ರಶ್ನಿಸಿ ತನ್ನ ಹಕ್ಕನ್ನು ಗಳಿಸಿಕೊಂಡ ಆಕೆ ತನ್ನ ಬಾಯಿ ಮುಚ್ಚಿಸಲು ನೋಡಿದ ಭಾರತೀಯ ಸಮಾಜದ ಸನಾತನವಾದಿಗಳ ಬಾಯಿ ಮುಚ್ಚಿಸಿದರು.

2017ರಲ್ಲಿ ಗೂಗಲ್ ಸಂಸ್ಥೆಯು ರುಕ್ಮ ಬಾಯಿಯವರ ಗೌರವಾರ್ಥವಾಗಿ ಅವರ 153ನೇ ಹುಟ್ಟುಹಬ್ಬದ ದಿನದಂದು ಆಕೆಗಾಗಿ ಒಂದು ಡೂಡಲನ್ನು ಸೃಷ್ಟಿಸಿ ಪ್ರಸಾರ ಮಾಡಿತು. ಆಕೆಯದ್ದೇ ಆದ ಪರಂಪರೆಯನ್ನು ಬಿಟ್ಟು ಹೋಗಿರುವ ರುಕ್ಮಬಾಯಿ ಪ್ರತಿ ಭಾರತೀಯ ಶಾಲೆ ಕಾಲೇಜುಗಳ ಬಾಲಕಿಯರ ಕಣ್ಣಿನಲ್ಲಿ ಶಿಕ್ಷಣದ ಕನಸನ್ನು ತುಂಬಲು ಸಹಾಯಕವಾಗಿದೆ. ತನ್ನ ಭವಿಷ್ಯವನ್ನು ತಾನೇ ನಿರ್ಧರಿಸುವ ದಾರಿ ತೋರಿದ್ದಾಳೆ. ಕೇವಲ ವಿವಾಹ ಮಾಡಿಕೊಂಡು ವಧುವಾಗಿರಬೇಕು ಎನ್ನುವ ಸಾಮಾಜಿಕ ಭಾವವನ್ನು ಪ್ರಶ್ನಿಸುವ, ಪ್ರತಿಯೊಬ್ಬ ವಧುವು ತನ್ನ ಬಾಯಿ ಮುಚ್ಚಿಸುವ, ಸಾಮಾಜಿಕ ಸಂಪ್ರದಾಯಗಳನ್ನು ವಿರೋಧಿಸುವ ಮೂಲಕ ತನ್ನದೇ ಆದ ಛಾಪು ಮೂಡಿಸಿದ್ದಾರೆ. ತನ್ನ ಮುಂದಿನ ಬದುಕನ್ನು ಮಹಿಳೆಯರ ಮತ್ತು ಮಕ್ಕಳ ಏಳಿಗೆಗಾಗಿ ಮುಡುಪಿಟ್ಟ ಆಕೆ ಭಾರತ ದೇಶದ ಎಲ್ಲ ಯುವತಿಯರ ಪಾಲಿನ ಸ್ತ್ರೀ ಕುಲ ತಿಲಕವಾಗಿದ್ದಾಳೆ.

**–ವೀಣಾ ಹೇಮಂತಗೌಡ ಪಾಟೀಲ್ ಮುಂಡರಗಿ ಗದಗ್**

# ರಾಯಚೂರಲ್ಲಿ ದಾಖಲೆಯ 2419 ಮನೆಗಳನ್ನು ನಿರ್ಮಿಸಿ ಬಡವರಿಗೆ ವಿತರಿಸುತ್ತಿರುವುದು ಮಹತ್ತರ ಕಾರ್ಯ: ಬೈರತಿ ಸುರೇಶ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.3–** ಜಿ+3 ಮಾದರಿಯಲ್ಲಿ ಅನುಮೋದನೆಗೊಂಡು, ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪ ಘಟಕ ಎಎಚ್‌ಪಿ ಯೋಜನೆಯಡಿ ರಾಯಚೂರು ಮಹಾನಗರ ಪಾಲಿಕೆಗೆ 54ನೇ ಸಿಎಸ್‌ಎಂಸಿಯಲ್ಲಿ, ಯರಮರಸ್ ಹತ್ತಿರದ ವಿಮಾನ ನಿಲ್ದಾಣ ಬಳಿಯಲ್ಲಿ ನಿರ್ಮಾಣ ಹಂತದಲ್ಲಿರುವ 2419 ವಸತಿ ಸಮುಚ್ಛಯದ ಸ್ಥಳಕ್ಕೆ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬೈರತಿ ಸುರೇಶ ಅವರು ಡಿಸೆಂಬರ್ 3ರಂದು ಭೇಟಿ ನೀಡಿದರು.

ಪೂರ್ವ ನಿಗದಿಯಂತೆ, ಬೆಳಗ್ಗೆ ಬಳ್ಳಾರಿಯಿಂದ ಹೆಲಿಕ್ಯಾಪ್ಟರ್ ಮೂಲಕ ಹೊರಟು ರಾಯಚೂರ ನಗರಕ್ಕೆ ಆಗಮಿಸಿ ಮಧ್ಯಾಹ್ನ 12.15ರ ವೇಳೆಗೆ ವಸತಿ ಸಮುಚ್ಛಯ ಸ್ಥಳಕ್ಕೆ ಆಗಮಿಸಿ ಕಾಮಗಾರಿಯ ಬಗ್ಗೆ ಮಾಹಿತಿ ಪಡೆದುಕೊಂಡರು. ಕಾಮಗಾರಿಯನ್ನು ಬೇಗನೇ ಪೂರ್ಣಗೊಳಿಸಿ, ಮನೆಗಳನ್ನು ಬಡಜನತೆಗೆ ವಿತರಿಸಲು ಕ್ರಮವಹಿಸುವಂತೆ ಸಚಿವರು ಸೂಚನೆ ನೀಡಿದರು.

ಈ ರೀತಿ, ಜಿ+3 ಸಮುಚ್ಛಯ ನಿರ್ಮಾಣ ಕಾರ್ಯವು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನದಲ್ಲಿ ರಾಜ್ಯದ ಬೇರೆ ಬೇರೆ ಕಡೆಗಳಲ್ಲಿ ನಡೆಯುತ್ತಿದೆ. ಬಡವರಿಗೆ ಮನೆಗಳನ್ನು ನಿರ್ಮಿಸಿ ಕೊಡುವ ಈ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದೇವೆ. ದಾಖಲೆಯ 2419 ಮನೆಗಳನ್ನು ನಿರ್ಮಿಸಿ ಕಡುಬಡವರಾದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಾಮಾನ್ಯ ವರ್ಗದ ಹಾಗೂ ಹಿಂದುಳಿದ ವರ್ಗದ ಜನತೆಗೆ ನೀಡುತ್ತಿರುವುದು ರಾಯಚೂರ ಇತಿಹಾಸದಲ್ಲಿ ಪ್ರಪ್ರಥಮವಾದ ದಾಖಲಾರ್ಹ ಕಾರ್ಯವಾಗಿದೆ ಎಂದು ಸಚಿವರು ತಿಳಿಸಿದರು.

ಮೌಲಸೌಕರ್ಯ ಕಲ್ಪಿಸಲು ಕ್ರಮ: ರಾಯಚೂರು ವಿಮಾನ ನಿಲ್ದಾಣದ ಬಳಿಯಲ್ಲಿ ನಿರ್ಮಾಣವಾಗುತ್ತಿರುವ ಜಿ+3 ವಸತಿ ಸಮುಚ್ಚಯಕ್ಕೆ ಬೇಕಿರುವ ರಸ್ತೆ ಸಂಪರ್ಕ, ಕುಡಿಯುವ ನೀರು ಸೇರಿದಂತೆ ಮೂಲ ಸೌಕರ್ಯ ಕಾರ್ಯಕ್ಕೆ ಬೇಕಾಗಿರುವ ಹೆಚ್ಚುವರಿ ಅನುದಾನವನ್ನು ನಗರಾಭಿವೃದ್ಧಿ ಇಲಾಖೆಯಿಂದ ಕೊಡುವುದಾಗಿ ಸಚಿವರು ಇದೆ ವೇಳೆ ತಿಳಿಸಿದರು.

ಈ ಮನೆಗಳನ್ನು 44 ಎಕರೆ ಜಾಗದಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ಮನೆಗಳ ನಿರ್ಮಾಣ ಕಾರ್ಯ ವಿವಿಧ ಹಂತಗಳಲ್ಲಿದೆ. ಪರಿಶಿಷ್ಟ ಜಾತಿಗೆ 951 ಮನೆಗಳು, ಪರಿಶಿಷ್ಟ ಪಂಗಡಕ್ಕೆ 1053 ಮನೆಗಳು, ಸಾಮಾನ್ಯ ವರ್ಗಕ್ಕೆ 228 ಮನೆಗಳು ಮತ್ತು ಹಿಂದುಳಿದ ವರ್ಗಕ್ಕೆ 187 ಮನೆಗಳು ಅನುಮೋದನೆಯಾಗಿವೆ. ಈ ಯೋಜನೆಯ ಅಂದಾಜು ವೆಚ್ಚ 9 ಲಕ್ಷ ಇರುತ್ತದೆ. ಎಸ್‌ಎಸಿ ಮತ್ತು ಎಸ್‌ಟಿ ಅವರಿಗೆ ಕೇಂದ್ರ ಮತ್ತು ರಾಜ್ಯದಿಂದ ಸಬ್ಸಿಡಿ ಅನುದಾನ ರಾಜ್ಯ ಸರ್ಕಾರದಿಂದ 2 ಲಕ್ಷ ರೂ ಹಾಗೂ ಕೇಂದ್ರ ಸರ್ಕಾರದ 1.5 ಲಕ್ಷ ರೂ ಅನುದಾನ ಸೇರಿ ಒಟ್ಟು 3.50 ಲಕ್ಷ ರೂ ನಿಗದಿಪಡಿಸಲಾಗಿದೆ. ಬ್ಯಾಂಕಿನಿಂದ ಲೋನ್ ಪಡೆದು ಬಾಕಿ ಉಳಿದ ಅನುದಾನವನ್ನು ಫಲಾನುಭವಿಗಳೇ ಭರಿಸಬೇಕಿರುತ್ತದೆ ಎಂದು ಜಿಲ್ಲಾಧಿಕಾರಿ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ ಅವರು ಸಚಿವರಿಗೆ ಮಾಹಿತಿ ನೀಡಿದರು.

ಈ ವೇಳೆ ಮಸ್ಕಿ ಶಾಸಕರಾದ ಬಸನಗೌಡ ತುರವಿಹಾಳ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ., ಏಗನೂರ ಗ್ರಾಪಂ ಅಧ್ಯಕ್ಷ ಶ್ರೀನಿವಾಸ ಹಾಗೂ ಇನ್ನೀತರರು ಇದ್ದರು.





ಯುವ ಮಾರ್ಗ

ಗುರುವಾರ: 04-12-2025

## ಕಲಾ ಪ್ರತಿಭೋತ್ಸವ ಕಾರ್ಯಕ್ರಮಕ್ಕೆ ಹೆಸರು ನೋಂದಾಯಿಸಲು ಸೂಚನೆ

**ರಾಯಚೂರು,ಡಿ.3–**ಇಲ್ಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಮಕ್ಕಳ ಮತ್ತು ಯುವಜನರ ಕಲಾಪ್ರತಿಭೆಯ ಕಲಾ ನೈಪುಣ್ಯತೆಯನ್ನು ವೃದ್ಧಿಗೊಳಿಸುವಂತೆ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಬಾಲ ಪ್ರತಿಭೆ/ ಕಿಶೋರ ಪ್ರತಿಭೆ/ ಯುವ ಪ್ರತಿಭೆ ಎಂಬ ಶೀರ್ಷಿಕೆಯಡಿ ಮೂರು ವಿಭಾಗಗಳ ಪ್ರತಿ ಹಂತದ ಸ್ಪರ್ಧಾರೂಪದಲ್ಲಿ ಏರ್ಪಡಿಸುವ ಪ್ರತಿ ಕಲಾಪ್ರಕಾರಗಳಲ್ಲಿ ಈ ಸ್ಪರ್ಧೆಗಳನ್ನು ಡಿಸೆಂಬರ್ 7 ರಂದು ಬಾಲಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ಡಿಸೆಂಬರ್ 08ರಂದು ಯುವ ಪ್ರತಿಭೆ / ಸಮೂಹ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದ್ದು, ಜಿಲ್ಲಾ ಮಟ್ಟದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನವನ್ನು ಪಡೆದವರಲ್ಲಿ ಪ್ರಥಮ ಸ್ಥಾನ ಪಡೆದವರನ್ನು ಮಾತ್ರ ವಲಯ ಮಟ್ಟದ ಸ್ಪರ್ಧೆಗೆ ಆಯ್ಕೆ ಮಾಡಿ ಕಳುಹಿಸಿಕೊಡಲಾಗುವುದು.

ಬಾಲ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 8 ವರ್ಷ ತುಂಬಿರಬೇಕು. ಹಾಗೂ 14 ವರ್ಷಕ್ಕಿಂತ ಕಡಿಮೆಯಿರಬೇಕು. ಕಿಶೋರ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 14 ವರ್ಷವಾಗಿರಬೇಕು. ಹಾಗೂ 18 ವರ್ಷಕ್ಕಿಂತ ಕಡಿಮೆಯಿರಬೇಕು. ಮತ್ತು ಯುವ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷ ತುಂಬಿರಬೇಕು. ಹಾಗೂ 30 ವರ್ಷಕ್ಕಿಂತ ಕಡಿಮೆಯಿರಬೇಕು. ಕ್ರಮವಾಗಿ ಬಾಲ ಪ್ರತಿಭೆ/ ಕಿಶೋರ ಪ್ರತಿಭೆ/ ಯುವ ಪ್ರತಿಭೆ ಸ್ಪರ್ಧೆಗಳಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅಭ್ಯರ್ಥಿಯು ವಯೋಮಿತಿಯ ದೃಢೀಕರಣಕ್ಕಾಗಿ ಬಾಲ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುವ ಶಾಲಾ ವತಿಯಿಂದ) / ಕಿಶೋರ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುತ್ತಿರುವ ಶಾಲಾ/ ಕಾಲೇಜು ವತಿಯಿಂದ) / ಯುವ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುವ ಕಾಲೇಜಿನಿಂದ) ಪಡೆದ ವಯೋಮಿತಿಯ ದೃಢೀಕರಣದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಬಾಲ ಪ್ರತಿಭೆ/ ಕಿಶೋರ ಪ್ರತಿಭೆ/ ಯುವ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಶಾಲೆಯಿಂದ ಬಂದ ಅಭ್ಯರ್ಥಿಯಲ್ಲದಿದ್ದಲ್ಲಿ ಅವರ ವಯಸ್ಸಿನ ಬಗ್ಗೆ ಪಂಚಾಯತಿ/ ನಗರಸಭೆ/ ಪಾಲಿಕೆ ಕಚೇರಿಯಿಂದ ಪಡೆದ ದೃಢೀಕರಣದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

ಬಾಲ ಪ್ರತಿಭೆ/ ಕಿಶೋರ ಪ್ರತಿಭೆಯಲ್ಲಿ ಏಕವ್ಯಕ್ತಿ ಸ್ಪರ್ಧೆಗಳಿಗೆ ಕಲಾಪ್ರಕಾರಗಳಿಗೆ ತಕ್ಕಂತೆ ಸಮಯವನ್ನು ನಿಗದಿಪಡಿಸಲಾಗಿರುತ್ತದೆ. ಶಾಸ್ತ್ರೀಯ ನೃತ್ಯಕ್ಕೆ 10–ನಿಮಿಷ, ಸುಗಮ ಸಂಗೀತಕ್ಕೆ 7–ನಿಮಿಷ, ಜಾನಪದ ಗೀತೆಗೆ–7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ವಾದ್ಯ ಸಂಗೀತಕ್ಕೆ–7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ಶಾಸ್ತ್ರೀಯ ಸಂಗೀತಕ್ಕೆ–7 ನಿಮಿಷ, ಚಿತ್ರಕಲೆಯ ಪ್ರದರ್ಶನಕ್ಕೆ–120 ನಿಮಿಷಗಳಂತೆ ಯುವ ಪ್ರತಿಭೆಯಲ್ಲಿ ಏಕವ್ಯಕ್ತಿ ಸ್ಪರ್ಧೆಗಳಿಗೆ ವಿವಿಧ ಕಲಾಪ್ರಕಾರಗಳಿಗೆ ತಕ್ಕಂತೆ ಸಮಯವನ್ನು ನಿಗದಿಪಡಿಸಲಾಗಿದೆ.

ನನ್ನ ಮೆಚ್ಚಿನ ಸಾಹಿತಿ (ಆಶುಭಾಷಣ ಸ್ಪರ್ಧೆಗೆ)–7 ನಿಮಿಷ, ಶಾಸ್ತ್ರೀಯ ನೃತ್ಯಕ್ಕೆ 10–ನಿಮಿಷ, ಸುಗಮ ಸಂಗೀತಕ್ಕೆ 7–ನಿಮಿಷ, ಹಿಂದುಸ್ಥಾನಿ ಕರ್ನಾಟಕ ವಾದ್ಯ ಸಂಗೀತಕ್ಕೆ–7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ಶಾಸ್ತ್ರೀಯ ಸಂಗೀತಕ್ಕೆ–7 ನಿಮಿಷ, ಚಿತ್ರಕಲೆಯ ಪ್ರದರ್ಶನಕ್ಕೆ–120 ನಿಮಿಷ ಮತ್ತು ಯುವ ಪ್ರತಿಭೆಯಲ್ಲಿ ಮಾತ್ರ ಸಮೂಹ ಸ್ಪರ್ಧೆಯಲ್ಲಿ ನಾಟಕ ಕಲಾಪ್ರಕಾರಕ್ಕೆ–7 ನಿಮಿಷಗಳ ಕಾಲ ಸಮಯವನ್ನು ನಿಗದಿಪಡಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಪ್ರತಿ ಕಲಾ ಪ್ರಕಾರದಲ್ಲಿ ಆಯ್ಕೆಯಾದ ಬಾಲ ಪ್ರತಿಭೆ / ಕಿಶೋರ ಪ್ರತಿಭೆ/ ಯುವ ಪ್ರತಿಭೆ ಹಾಗೂ ನಾಟಕ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ಒಬ್ಬರನ್ನು ಸಂಬಂಧಿತ ವಲಯ ಮಟ್ಟಕ್ಕೆ ಕಳುಹಿಸಿಕೊಡಲಾಗುವುದು. ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಾರ್ಥಿಗಳಿಗೆ ಇಲಾಖೆಯಿಂದ ಪ್ರಮಾಣ ಪತ್ರ ನೀಡಲಾಗುವುದು. ಹಾಗೂ ಬಾಲ ಪ್ರತಿಭೆ / ಕಿಶೋರ ಪ್ರತಿಭೆ/ ಯುವ ಪ್ರತಿಭೆಗಳಲ್ಲಿ ಪ್ರದರ್ಶಿಸಲಿರುವ ಕಲೆಯ ವಿವರವನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ ಶಾಲಾ/ ಕಾಲೇಜು ಮುಖ್ಯಸ್ಥರಿಂದ ದೃಢೀಕರಿಸಿ ಡಿಸೆಂಬರ್–06ರೊಳಗಾಗಿ ರಾಯಚೂರಿನ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ತಮ್ಮ ಸ್ವ–ವಿವರವನ್ನು ನೀಡಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೂಕಿಹಾಳ ಗ್ರಾಮ ಪಂಚಾಯತಗೆ ಗಾಂಧಿ ಗ್ರಾಮ ಪುರಸ್ಕಾರ ಪ್ರಶಸ್ತಿ



**ತಾಳಿಕೋಟೆ,ಡಿ.3–** ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕೊಡಲ್ಪಡುವ ಗಾಂಧಿ ಗ್ರಾಮ ಪುರಸ್ಕಾರ ಪ್ರಶಸ್ತಿಗೆ ಆಯ್ಕೆಯಾಗಿರುವ ತಾಳಿಕೋಟಿ ತಾಲೂಕಿನ ಮೂಕಿಹಾಳ ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ಶ್ರೀ ಆರ್ ಎಚ್ ಮೇಟಿ ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀದೇವಿ ಗುಂಡಾಪೂರ ಇವರು ಸಚಿವ ಪ್ರಿಯಾಂಕ ಖರ್ಗೆ ಅವರಿಂದ ಸೋಮವಾರ ಪ್ರಶಸ್ತಿ ಸ್ವೀಕರಿದರು.

# ಜ್ಞಾನ ಲಹರಿ ಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ

ಯುವಮಾರ್ಗ ಸುದ್ದಿ



**ಅರಕೇರಾ,ಡಿ.3–** ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕ್ಷೇತ್ರ ಸಂಪನ್ಮೂಲ ಕೇಂದ್ರದ ವತಿಯಿಂದ ಜ್ಞಾನ ಲಹರಿ ಆಂಗ್ಲ ಮಾಧ್ಯಮ ಪಬ್ಲಿಕ್ ಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮವನ್ನು ಶ್ರೀ ಚನ್ನ ಬಸವೇಶ್ವರ ಆರೂಢ ಮಠದ ಅಯ್ಯಣ್ಣ ತಾತನವರು ಉದ್ಘಾಟಿಸಿದರು. ಶಿಕ್ಷಣ ಸಂಯೋಜಕರಾದ ರಾಜನಗೌಡ ಕೋಳೂರು ಅವರು ಮಾತನಾಡಿ ಈ ಪ್ರತಿಭಾ ಕಾರಂಜಿ ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆಯನ್ನು ಅನಾವರಣ ಮಾಡಲು ಸೂಕ್ತ ವೇದಿಕೆಯಾಗಿದೆ. ಕಳೆದ ವರ್ಷ ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸಿ ಗಲಗ ಗ್ರಾಮದ ವಿದ್ಯಾರ್ಥಿಗಳು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ ಪ್ರಶಸ್ತಿ ಪಡೆದಿದ್ದಾರೆ. ಅದೇ ರೀತಿ ಅವಕಾಶವನ್ನು ಬಳಸಿಕೊಂಡು ಕ್ರಿಯಾಶೀಲರಾಗಬೇಕೆಂದು ಸಲಹೆ ನೀಡಿದರು.

ಪ್ರತಿಭಾ ಕಾರಂಜಿಯಲ್ಲಿ ಭಾಷಣ, ಜಾನಪದ ಗೀತೆ, ನೃತ್ಯ, ಕಥೆ, ಚಿತ್ರ ಕಲೆ, ಧಾರ್ಮಿಕ ಪಠಾಣ್, ಆಶುಭಾಷಣ, ವೇಷಭೂಷಣ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಿತು. ಸ್ಪರ್ಧೆಯಲ್ಲಿ ಎರಡು ಪ್ರೌಢ ಶಾಲೆಗಳು, 8 ಹಿರಿಯ ಪ್ರಾಥಮಿಕ ಶಾಲೆಗಳು, 12 ಕಿರಿಯ ಪ್ರಾಥಮಿಕ ಶಾಲೆಗಳು ಸೇರಿದಂತೆ ಒಟ್ಟು 20ಕ್ಕೂ ಹೆಚ್ಚು ಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.ಬಳಿಕ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪದಕ ಮತ್ತು ಪ್ರಶಸ್ತಿ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ದುರ್ಗಪ್ಪ ಗೌಡ ಮತ್ತು ಗ್ರಾಮ ಪಂಚಾಯಿತಿ ಸದಸ್ಯರು, ತಾಲೂಕಿನ ಸಂಪನ್ಮೂಲ ವ್ಯಕ್ತಿಗಳಾದ ವೆಂಕಟೇಶ, ಮನೋಹರ್ ಶಾಸ್ತ್ರೀ, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ನಿಂಗಪ್ಪ ಮಾಲೀ, ಶಾಲೆಯ ಆಡಳಿತ ಮಂಡಳಿ ಅಧಿಕಾರಿಗಳಾದ ವೀರಭದ್ರಪ್ಪ ಹೇರೂರು, ವಿವಿಧ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ತುಂಗಭದ್ರಾ ನೀರಾವರಿ ಕಾರ್ಮಿಕರ ಬೇಡಿಕೆಗಳು: ಮನವಿ ಸಲ್ಲಿಕೆ

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.3–**ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ಉಪ ವಿಭಾಗದ ಸಮಿತಿಯು ಮಾನ್ವಿಯ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮನವಿ ಸಲ್ಲಿಸುವ ಮೂಲಕ ಪ್ರತಿಭಟನೆ ನಡೆಸಿತು.

ಯರಮರಸ್ ವೃತ್ತದ ಸಿಂಧನೂರು, ಸಿರಿವಾರ ಮತ್ತು ಯರಮರಸ್ ವಿಭಾಗದ ಎಲ್ಲಾ ಉಪ ವಿಭಾಗದಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಜೂನ್ ತಿಂಗಳಿನಿಂದ ಬಾಕಿ ಇರುವ ವೇತನ, ಪಿಎಫ್ ಮತ್ತು ಇಎಸ್ಐ ಅನ್ನು ತಕ್ಷಣ ಪಾವತಿಸಬೇಕು ಎಂದು ಸಂಘವು ಆಗ್ರಹಿಸಿತು. ಇದರ ಜೊತೆಗೆ, ಏಪ್ರಿಲ್‌ನಿಂದ ಹೆಚ್ಚಳ ವಾಗಿರುವ ತುಟ್ಟಿ ಭತ್ಯೆ ಯನ್ನು ತಕ್ಷಣ ಕಾರ್ಮಿಕರ ಖಾತೆಗೆ ಜಮಾ ಮಾಡಬೇಕು ಎಂದು ಒತ್ತಾಯಿಸಲಾಯಿತು.

ಕಾರ್ಮಿಕರಿಗೆ ಪ್ರತಿ ತಿಂಗಳು ವೇತನ, ಪಿಎಫ್, ಇಎಸ್ಐ ಪಾವತಿಸದ ಗುತ್ತಿಗೆದಾರರ ಗುತ್ತಿಗೆ ಒಪ್ಪಂದವನ್ನು ರದ್ದುಪಡಿಸಿ, ಅವರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು ಎಂದು ಬೇಡಿಕೆ ಇಡಲಾಗಿದೆ. ಗುತ್ತಿಗೆ ಪದ್ಧತಿಯಿಂದ ಕಾರ್ಮಿಕರಿಗೆ ಮತ್ತು ನಿಗಮಕ್ಕೆ ಆಗುತ್ತಿರುವ ನಷ್ಟವನ್ನು ತಪ್ಪಿಸಲು, ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸಿ, ನೇರ ಪಾವತಿ ಪದ್ಧತಿಗೆ ಶಿಫಾರಸು ಮಾಡಬೇಕು ಎಂದು ಸಂಘವು ಮನವಿ ಮಾಡಿದೆ.

ಕಾಲುವೆ ಮೇಲೆ ಕೆಲಸ ಮಾಡುವವರಿಗೆ ಸಮವಸ್ತ್ರ ಮತ್ತು ಐಡಿ ಕಾರ್ಡ್ ಸೇರಿದಂತೆ ಮೂಲ ಸೌಕರ್ಯಗಳನ್ನು ಒದಗಿಸಬೇಕು ಹಾಗೂ ಕಚೇರಿ/ಕ್ಯಾಂಪ್ ಕಾರ್ಮಿಕರಿಗೆ ತಿಂಗಳಪೂರ್ತಿ ವೇತನ ನೀಡಬೇಕು ಮತ್ತು ಕಾನೂನು ಬಾಹಿರವಾಗಿ 26 ದಿನಗಳ ವೇತನ ಪಾವತಿ ಮಾಡುವುದನ್ನು ನಿಲ್ಲಿಸಬೇಕು ಎಂದೂ ಕಾಮಿರ್ಕರು ಒತ್ತಾಯಿಸಿದ್ದಾರೆ.

ಕಾರ್ಮಿಕರ ಕುಟುಂಬಗಳ ಗೌರವಯುತ ಜೀವನಕ್ಕಾಗಿ ಈ ಎಲ್ಲಾ ಬೇಡಿಕೆಗಳನ್ನು ಶೀಘ್ರದಲ್ಲಿ ಈಡೇರಿಸುವಂತೆ ಸಂಘವು ಆಗ್ರಹಿಸಿತು. ಸಂಘದ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ, ಉಪ ವಿಭಾಗದ ಅಧ್ಯಕ್ಷ ಬಸಲಿಂಗಪ್ಪ ಜಂಬಲದಿನ್ನಿ, ಕೇಂದ್ರ ಸಮಿತಿ ಖಜಾಂಚಿ ಜಲೀಲ್ ಪಾಷಾ ಸೇರಿದಂತೆ ಹಲವರು ಈ ಸಂದರ್ಭದಲ್ಲಿ ಹಾಜರಿದ್ದರು.

# ಉಚಿತ ಆರೋಗ್ಯ ತಪಾಸಣೆ ಶಿಬಿರ ಹಾಗೂ ಆರೋಗ್ಯ ಶಿಕ್ಷಣ ಕಾರ್ಯಕ್ರಮ

ಯುವಮಾರ್ಗ ಸುದ್ದಿ




**ದೇವದುರ್ಗ ,ಡಿ.3–**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ಪ್ರಾಥಮಿಕ ಆರೋಗ್ಯ ಕೇಂದ್ರ ಮಸರಕಲ್ ಮತ್ತು ಪೀಪಲ್ ಟು ಪೀಪಲ್ ಹೆಲ್ತ್ ಫೌಂಡೇಶನ್ ಜಿ ಇ ಹೆಲ್ತ್ ಕೇರ್ ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಯಿತು. ಪ್ರಾಥಮಿಕ ಆರೋಗ್ಯ ಕೇಂ ದ್ರದ ವೈದ್ಯಾಧಿಕಾರಿಗಳಾಗಿರುವ ಡಾ. ಶಂಶುದ್ದೀನ್ ಇವರು ಮಾತನಾಡಿ, ಮಸರಕಲ್ ನಲ್ಲಿ ಉಚಿತ ಆರೋಗ್ಯ ಶಿಬಿರದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಬಿಪಿ ಶುಗರ್ ತಪಾಸಣೆ, ಎಚ್ ಬಿ ತಪಾಸಣೆ, ಕಣ್ಣು ತಪಾಸಣೆ, ಹಲ್ಲು ತಪಾಸಣೆ,ಪೌಷ್ಟಿಕ ಆಹಾರದ ಬಗ್ಗೆ ಮಾಹಿತಿ, ಸ್ತ್ರೀ ರೋಗ ತಜ್ಞರಿಂದ ಮಹಿಳಾ ತಪಾಸಣೆ, ಮಾನಸಿಕ ಆರೋಗ್ಯದ ಬಗ್ಗೆ ಮಾಹಿತಿ ಮತ್ತು ಆಪ್ತ ಸಮಾಲೋಚನೆ, ಹೆಚ್ ಐ ವಿ ಪರೀಕ್ಷೆ, ಕ್ಷಯರೋಗ ಪರೀಕ್ಷೆ, ಮತ್ತು ರಾಷ್ಟ್ರೀಯ ಕಾರ್ಯಕ್ರಮಗಳ ಕುರಿತು ಉಚಿತವಾಗಿ ಆರೋಗ್ಯ ಶಿಕ್ಷಣ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಈ ಒಂದು ಕಾರ್ಯಕ್ರಮದ ಸದುಪಯೋ ಗವನ್ನು ತಾವೆಲ್ಲರೂ ಪಡೆದುಕೊಳ್ಳಬೇಕಾಗಿ ತಿಳಿಸಿದರು, ಪೀಪಲ್ ಟು ಪೀಪಲ್ ಸಂಸ್ಥೆಯ ಮ್ಯಾನೇಜರ್ ಆಗಿರುವ ಮಲ್ಲಿಕಾ ಇವರು ಮಾತನಾಡಿ ಈ ಶಿಬಿರದಲ್ಲಿ ಎಲ್ಲಾ ಪರೀಕ್ಷೆಗಳು ಉಚಿತವಾಗಿ ದೊರೆಯಲಿದ್ದು ಸದುಪಯೋಗ ಪಡೆದುಕೊಳ್ಳುವ ಂತೆ ಮನವಿ ಮಾಡಿದರು ಮತ್ತು ಉಚಿತವಾಗಿ ಆಭಾ ಕಾರ್ಡ್ ಮಾಡಿಕೊಡಲಾಗುತ್ತದೆ ಎಂದು ತಿಳಿಸಿದರು. ಗೀತಮ್ಮಬಿ ಹೆಚ್ ಇ ಒ ಇವರು ಮಾತನಾಡಿ ಆರೋಗ್ಯ ಇಲಾಖೆಯ ಸೇವಾ ಸೌಲಭ್ಯಗಳ ಎನ್ ಎಸ್ ವಿ, ಸಾನ್ಸ್, ಹಾವು ಕಡಿತ ನಾಯಿ ಕಡಿತದ ಜಾಗೃತಿ,ವಿಶ್ವ ಏಡ್ಸ್ ದಿನದ ಕುರಿತು, ಬಾಲ್ಯ ವಿವಾಹ ತಡೆಗಟ್ಟುವುದು, ತಾಯಿ ಮಕ್ಕಳ ಆರೋಗ್ಯದ ಬಗ್ಗೆ ಕಾಳಜಿ,ಕುರಿತು ಮಾಹಿತಿ ನೀಡಿದರು. ತಾಲೂಕ ಕ್ಷಯರೋಗ ಮೇಲ್ವಿಚಾರಕ ರವಿಶಂಕರ್ ಶುಕ್ಲಾ ಇವರು ಮಾತನಾಡಿ ಕ್ಷಯ ರೋಗ ಹರಡುವಿಕೆಯ ಲಕ್ಷಣಗಳ ಬಗ್ಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಕ್ಷಯರೋಗ ಪತ್ತೆ, ಚಿಕಿತ್ಸೆ ಮತ್ತು ನಿಯಂತ್ರಣ ಕ್ರಮಗಳ ಕುರಿತು, ಕ್ಷಯಮುಕ್ತ ಭಾರತ, ನಿಕ್ಷಯ್ ಪೋಷಣೆ ಯೋಜನೆ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಡಾ. ವೇಧರಾಜ್, ಡಾ, ಮೇಘ, ಡಾ. ಅಪೇಕ್ಷಾ, ಮಲ್ಲಿಕ, ಆಶಾ, ನರಸಿಂಹರಾಜ, ಸಾನಿಯ್, ನರಸಮ್ಮ, ಮುತ್ತಣ್ಣ, ಪೂಜಾ, ಸಂದ್ಯಾ, ನಾಗರತ್ನ, ರಾಮಾಮೂರ್ತಿ, ಜಯಲಕ್ಷ್ಮಿ, ಮಲ್ಲಯ್ಯ, ನಂದಕುಮಾರ, ಜೀವನ್, ಶಂಕರ್, ನವಾಜ್, ಭೀಮೇಶಪ್ಪ, ರೇಣುಕಾ, ವಸಂತಮ್ಮ, ಶಿವಕಲಾ, ದೀಪಾ, ಚಂದ್ರಿಕಾ, ರೈಸ್ ಫಾತಿಮಾ, ಬಾಬುರಾವ, ರಮೇಶ್, ಈಶಮ್ಮ, ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು, ಆಶಾ ಕಾರ್ಯಕರ್ತೆಯರು ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆಯಡಿ ಅರ್ಜಿ ಆಹ್ವಾನ

**ರಾಯಚೂರು,ಡಿ.3–** ಇಲ್ಲಿನ ಮೀನುಗಾರಿಕೆ ಇಲಾಖೆಯಿಂದ ಜಿಲ್ಲೆಯ ರಾಯಚೂರು, ದೇವದುರ್ಗ, ಮಾನವಿ, ಸಿರವಾರ ಹಾಗೂ ಅರಕೇರಾ ತಾಲ್ಲೂಕಿನಲ್ಲಿ 2025–26ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ ಸಂಪದ ಯೋಜನೆಯ ಧರ್ತಿ ಅಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ (ಡಿಎಜೆಜಿಯುಎ)ದಡಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭಿಯಾನದಡಿ ಬುಡಕಟ್ಟು ಸಮುದಾಯದ ಪರಿಶಿಷ್ಟ ಪಂಗಡದ (ಎಸ್‌ಟಿ) ವರ್ಗದವರಿಗೆ ಮಾತ್ರ ಮೀನು ಮಾರಾಟಕ್ಕಾಗಿ ಐಸ್ ಬಾಕ್ಸ್ ನೊಂದಿಗೆ ದ್ವಿಚಕ್ರ ವಾಹನ ಖರೀದಿ ಮತ್ತು ಜೀವಂತ ಮೀನು ಮಾರಾಟ ಮಳಿಗೆ ಕೇಂದ್ರಗಳನ್ನು ಸ್ಥಾಪಿಸಲು ನಿಗದಿತ ಗುರಿಗಳನ್ವಯ ಕೇಂದ್ರ ಸರ್ಕಾರವು ನೀಡಿರುವ ಪಟ್ಟಿಯಲ್ಲಿರುವ ಗ್ರಾಮಗಳಿಗೆ ಮಾತ್ರ ಸೀಮಿತಗೊಳಿಸಿ ಮೀನುಗಾರಿಕೆಯಲ್ಲಿ ತೊಡಗಿರುವ ಪರಿಶಿಷ್ಟ ಪಂಗಡದ ಆಸಕ್ತರು ಡಿಸೆಂಬರ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಾಯಚೂರಿನ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು ದೂರವಾಣಿ ಸಂಖ್ಯೆ: 8050196667ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರಿನ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ.ಬಿ.ಆರ್.ಅಂಬೇಡ್ಕರ್ ಮಹಾಪರಿನಿರ್ವಾಣ ದಿನಾಚರಣೆಯಲ್ಲಿ ಭಾಗಿಯಾಗಲು ಮನವಿ

**ರಾಯಚೂರು,ಡಿ.3–**ಇಲ್ಲಿನ ಸಮಾಜ ಕಲ್ಯಾಣ ಇಲಾಖೆಯಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಹಾಪರಿನಿರ್ವಾಣ ದಿನಾಚರಣೆಯ ಅಂಗವಾಗಿ ಡಿಸೆಂಬರ್ 06ರ ಬೆಳಿಗ್ಗೆ 9 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಮತ್ತು ಎಲ್ಲಾ ಗಣ್ಯ ಮಾನ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ತರಬೇತಿಗೆ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು,ಡಿ.3–** ಇಲ್ಲಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ವಿವಿಧ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯಲ್ಲಿ ಮನೆಯಲ್ಲಿ ಅಗರಬತ್ತಿ ತಯಾರಿಸುವ 12 ದಿನಗಳು ಹಾಗೂ 20 ದಿನಗಳ ಕಾಲ ಹಪ್ಪಳ, ಉಪ್ಪಿನಕಾಯಿ ಮತ್ತು ಮಸಾಲಾ ಪುಡಿ ತಯಾರಿಕೆಯ ಮೂಲಗಳ ಕುರಿತು ತರಬೇತಿ ನೀಡಲಾಗುವುದು.

ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸೊಂದಿಗೆ ನವೆಂಬರ್ 13ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 8217382735, 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹತ್ತಿ ಖರೀದಿ ಪ್ರಕ್ರಿಯೆ ಆರಂಭ; ಸದುಪಯೋಗಕ್ಕೆ ಮನವಿ

**ರಾಯಚೂರು,ಡಿ.3–** ಜಿಲ್ಲೆಯಲ್ಲಿ 2025–26ನೇ ಸಾಲಿನಲ್ಲಿ ಹತ್ತಿ ಬೆಳೆಗಾರರಿಂದ ಭಾರತೀಯ ಹತ್ತಿ ನಿಗಮ ನಿಯಮಿತ (ಸಿಸಿಐ) ವತಿಯಿಂದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಹತ್ತಿ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಹತ್ತಿ ಬೆಂಬಲ ಬೆಲೆಯ ಕಾರ್ಯಕ್ರಮದಡಿ ಖರೀದಿ ಕೇಂದ್ರಗಳು ಮತ್ತು ನೋಂದಣಿ ಪ್ರಕ್ರಿಯೆ ಭಾರತೀಯ ಹತ್ತಿ ನಿಗಮದಿಂದ ಜಿಲ್ಲಾದ್ಯಂತ ವಿವಿಧ ಪ್ರಾಂಗಣಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ಇಲ್ಲಿಯವರೆಗೆ ಸುಮಾರು 27,929 ರೈತರು ಹತ್ತಿ ಬೆಂಬಲ ಬೆಲೆ ಯೋಜನೆಯಡಿ ಕಪಾಸ್ ಕಿಸಾನ್ ಅಪ್ಲಿಕೇಶನ್ ಮೂಲಕ ನೋಂದಣಿ ಮಾಡಿಕೊಂಡಿದ್ದಾರೆ. ಈ ನೋಂದಣಿ ಪ್ರಕ್ರಿಯೆ ಹಾಗೂ ಖರೀದಿ ದಿನಾಂಕವನ್ನು ಡಿಸೆಂಬರ್ 31 ರವರೆಗೆ ಜಾರಿಯಲ್ಲಿದ್ದು, ಎಲ್ಲಾ ರೈತರು ಕಡ್ಡಾಯ ನೋಂದಾಯಿಸಿಕೊಂಡು ಹತ್ತಿ ಬೆಂಬಲ ಬೆಲೆ ಯೋಜನೆಯ ಸವಲತ್ತನ್ನು ಪಡೆಯಬಹುದಾಗಿದೆ. ಕನಿಷ್ಠ ಗುಣಮಟ್ಟದ ಮಾನದಂಡಗಳನ್ನು ಪೂರೈಸುವ, ಹತ್ತಿ ಮಾರಾಟದ ಹಣವು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಜಮಾ ಆಗಲಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H